Volume : 9 | Issue : 151 | August : 30 : 2026 : Sunday
ಸಂಪುಟ : 9 | ಸಂಚಿಕೆ : 151 | ಆಗಸ್ಟ್ : 30 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ



ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481

'ಯಶ್ ಅತ್ಯಂತ ಸಂವೇದನಾಶೀಲ ಹಾಗೂ ಕಾಳಜಿಯುಳ್ಳ ವ್ಯಕ್ತಿ, ಚಿತ್ರರಂಗದಲ್ಲಿ ಅವರಂತಹ ಅಪರೂಪದ ವ್ಯಕ್ತಿತ್ವ ಹೊಂದಿರುವವರು ವಿರಳ' ಎಂದು ತಾರಾ ಸುತಾರಿಯಾ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಶ್ರೀರಾಘವೇಂದ್ರ ಗುರು ಸಾರ್ವಭೌಮರ ಆರಾಧನಾ ಮಹೋತ್ಸವ | ಪುಟ 2

ಡಿ.ಕೆ.ಶಿ ಬಾಲ್ಯ ಸ್ನೇಹಿತ ಕ್ರೇಜಿಸ್ಟಾರ್ ರವೀಚಂದ್ರನ್ ವಿಧಾನಪರಿಷತ್ತಿಗೆ? | ಪುಟ 4

## ■ ಸುದ್ದಿ ಚುಟುಕು

### ಹನೂರು ಎನ್‌ಕೌಂಟರ್; ಸಿಐಡಿ ತನಿಖೆ ಶುರು

● ವಿಕ್ರಮ ವಾಹಿನಿ | ಬೆಂಗಳೂರು

ಚಾಮರಾಜನಗರ ಜಿಲ್ಲೆ, ಹನೂರಿನ ಕಾವೇರಿ ವನ್ಯಧಾಮದಲ್ಲಿ ನಡೆದ ಎನ್‌ಕೌಂಟರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮ್ಯಾಜಿಸ್ಟ್ರೇಟ್ ತನಿಖಾ ವರದಿ ಸಲ್ಲಿಕೆಯಾದ ಬಳಿಕ ಸಿಐಡಿ ಅಧಿಕಾರಿಗಳು ತನಿಖೆಯನ್ನು ಕೈಗೊಂಡಿದ್ದಾರೆ.

ಎನ್‌ಕೌಂಟರ್ ಪ್ರಕರಣದ ತನಿಖೆಯನ್ನು ಸರ್ಕಾರವು ಸಿಐಡಿಗೆ ವಹಿಸಿದ್ದು, ತನಿಖೆಗಾಗಿ ನಾಲ್ಕು ತಂಡಗಳನ್ನು ರಚಿಸಲಾಗಿದೆ. ಇಬ್ಬರು ಡಿವೈಎಸ್ಪಿಗಳು ಹಾಗೂ ಇಬ್ಬರು ಇನ್ಸ್‌ಪೆಕ್ಟರ್‌ಗಳ ನೇತೃತ್ವದಲ್ಲಿ ಈ ನಾಲ್ಕು ತಂಡಗಳನ್ನು ರಚಿಸಲಾಗಿದ್ದು, ಈಗಾಗಲೇ ಸಿಐಡಿ ತಂಡವು ಸ್ಥಳದಲ್ಲಿ ಬೀಡುಬಿಟ್ಟಿದೆ.

ಎನ್‌ಕೌಂಟರ್ ಹಾಗೂ ಹನೂರು, ರಾಮಾಪುರ, ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಒಟ್ಟು ನಾಲ್ಕು ಪ್ರಕರಣಗಳ ತನಿಖೆಯನ್ನು ಸಿಐಡಿ ನಡೆಸಲಿದೆ.

ಈ ಕುರಿತು ಸ್ಥಳೀಯ ಪೊಲೀಸರು ಈಗಾಗಲೇ ಸಿಐಡಿಗೆ ಕೇಸ್ ಫೈಲ್ ಹಸ್ತಾಂತರಿಸಿದ್ದಾರೆ. ಡಿವೈಎಸ್ಪಿ ಸತೀಶ್ ಚಿಟಗುಬ್ಬಿ, ಡಿವೈಎಸ್ಪಿ ಡಿ.ಎಸ್. ರಾಜೇಂದ್ರ, ಪೊಲೀಸ್ ಇನ್ಸ್‌ಪೆಕ್ಟರ್ ಕೆ.ಪಿ. ಗೋಪಾಲ್ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಹೆಚ್.ಎನ್. ಹೊನ್ನಪ್ಪ ಅವರ ನೇತೃತ್ವದಲ್ಲಿ ಸಿಐಡಿಯ ನಾಲ್ಕು ತಂಡಗಳು ತನಿಖೆ ಕೈಗೊಳ್ಳಲಿವೆ.

### ವೈದ್ಯಕೀಯ ಕಾಲೇಜು ಕ್ಯಾಂಟೀನ್‌ಗಳಿಗೆ ದಾಳಿ

● ವಿಕ್ರಮ ವಾಹಿನಿ | ಬೆಂಗಳೂರು

ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ಆಹಾರ ಸುರಕ್ಷತಾ ಪ್ರಾಧಿಕಾರವು ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಹಾಸ್ಟೆಲ್‌ಗಳ ಕ್ಯಾಂಟೀನ್ ಮತ್ತು ಅಡುಗೆ ಕೋಣೆಗಳ ಮೇಲೆ ತಪಾಸಣಾ ಕಾರ್ಯಾಚರಣೆಯನ್ನು ಮುಂದುವರಿಸಿದೆ.

ತಪಾಸಣಾ ತಂಡವು ಒಟ್ಟು 34 ಕ್ಯಾಂಟೀನ್ ಹಾಗೂ ಅಡುಗೆ ಕೋಣೆಗಳನ್ನು ಪರಿಶೀಲಿಸಿದ್ದು, ಆಹಾರ ಸುರಕ್ಷತಾ ನಿಯಮಗಳಲ್ಲಿ ಲೋಪ ಕಂಡುಬಂದ 5 ಕ್ಯಾಂಟೀನ್‌ಗಳಿಗೆ ನೋಟಿಸ್ ಜಾರಿ ಮಾಡಿದೆ.

ಪರಿಶೀಲನೆ ವೇಳೆ ಒಂದು ಕ್ಯಾಂಟೀನ್‌ನಲ್ಲಿ ಆಹಾರ ಪದಾರ್ಥಗಳ ಲೇಬಲಿಂಗ್‌ಗೆ ಸಂಬಂಧಿಸಿದ ನಿಯಮ ಉಲ್ಲಂಘನೆ ಪತ್ತೆಯಾಗಿದೆ. ಅಲ್ಲದೆ, ಅವಧಿ ಮೀರಿದ 7 ಕೆ.ಜಿ. ರವೆ ಹಾಗೂ 8 ಲೀಟರ್ ಹಾಲಿನ ಪ್ಯಾಕೇಟ್‌ಗಳನ್ನು ಜಪ್ತಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಮಾನದಂಡಗಳನ್ನು ಉಲ್ಲಂಘಿಸಿರುವ ಆಹಾರ ಉದ್ದಿಮೆದಾರರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದ್ದು, ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಮಾನದಂಡಗಳ ಕಾಯ್ದೆ ಹಾಗೂ ನಿಯಮಗಳ ಅನ್ವಯ ಪ್ರಕರಣ ದಾಖಲಿಸಲಾಗಿದೆ.

ಮುಂದಿನ ಕಾನೂನು ಕ್ರಮಕ್ಕಾಗಿ ಸಂಬಂಧಪಟ್ಟವರನ್ನು ಅಪರ ಜಿಲ್ಲಾಧಿಕಾರಿಗಳ ನ್ಯಾಯಾಲಯದ ವಿಚಾರಣೆಗೆ ಹಾಜರುಪಡಿಸಲಾಗುವುದು ಎಂದು ಆಹಾರ ಸುರಕ್ಷತಾ ಪ್ರಾಧಿಕಾರ ತಿಳಿಸಿದೆ.

ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಸುರಕ್ಷಿತ ಮತ್ತು ಗುಣಮಟ್ಟದ ಆಹಾರ ದೊರೆಯುವಂತೆ ಇಂತಹ ತಪಾಸಣಾ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

### ಕೆಪಿಎಸ್‌ಸಿ ಅಕ್ರಮ: ಜ್ಞಾನೇಂದ್ರ ಕುಮಾರ್ ವಶಕ್ಕೆ

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (KPSC)ದ ಮೂಲಕ ನಡೆದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣದ ತನಿಖೆ ಮತ್ತಷ್ಟು ತೀವ್ರಗೊಂಡಿದ್ದು, ಪರೀಕ್ಷಾ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರನ್ನು ಸಿಐಡಿ ವಶಕ್ಕೆ ಪಡೆದಿದೆ.

ಪ್ರಶ್ನೆಪತ್ರಿಕೆ ಸೋರಿಕೆ, ಅಂಕಗಳ ತಿದ್ದುಪಡಿ ಹಾಗೂ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಕುರಿತು ಸಿಐಡಿ ವಿಶೇಷ ತನಿಖಾ ತಂಡ ವಿಚಾರಣೆ ನಡೆಸುತ್ತಿದೆ.

ಪ್ರಕರಣದ ತನಿಖೆಯ ಭಾಗವಾಗಿ ಜ್ಞಾನೇಂದ್ರ ಕುಮಾರ್ ಅವರನ್ನು ಸತತ ಎರಡು ದಿನಗಳ ಕಾಲ ಸುದೀರ್ಘವಾಗಿ ವಿಚಾರಣೆ ನಡೆಸಿದ ಬಳಿಕ ಶುಕ್ರವಾರ ಅವರನ್ನು ವಶಕ್ಕೆ ಪಡೆಯಲಾಗಿದೆ. ಆ.28ರಂದು ಸಿಐಡಿ ಅಧಿಕಾರಿಗಳು ಜ್ಞಾನೇಂದ್ರ ಕುಮಾರ್ ಅವರನ್ನು ಸುಮಾರು 11 ಗಂಟೆಗಳ ಕಾಲ ವಿಚಾರಣೆ ನಡೆಸಿದ್ದರು. 3ನೇ ಪುಟಕ್ಕೆ...

# ಸಂಪುಟ ವಿಸ್ತರಣೆ ಕಗ್ಗಂಟು; ದೆಹಲಿಯಲ್ಲಿ ಅಂತಿಮ ಕಸರತ್ತು

● ವಿಕ್ರಮ ವಾಹಿನಿ | ಬೆಂಗಳೂರು




ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಯಿಂದ ರಾಜ್ಯ ಸಚಿವ ಸಂಪುಟದಲ್ಲಿ ತೆರವಾಗಿರುವ ಸ್ಥಾನ ಭರ್ತಿಗೆ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿವೆ. ಈಗಾಗಲೇ ಒಂದು ಹಂತದ ಸಂಪುಟ ವಿಸ್ತರಣೆಗೆ ಕಸರತ್ತು ನಡೆದಿದ್ದರೂ, ವಿವಿಧ ಸಮುದಾಯಗಳು, ಹಿರಿಯ ಶಾಸಕರು ಹಾಗೂ ಮಹಿಳಾ ಪ್ರಾತಿನಿಧ್ಯದ ಬೇಡಿಕೆಗಳು ಮುನ್ನೆಲೆಗೆ ಬಂದಿರುವುದರಿಂದ ಮೂರನೇ ಹಂತದ ಸಂಪುಟ ವಿಸ್ತರಣೆ ಕಾಂಗ್ರೆಸ್ ವರಿಷ್ಠರಿಗೆ ಸವಾಲಾಗಿ ಪರಿಣಮಿಸಿದೆ.

ರಾಜ್ಯ ಸಚಿವ ಸಂಪುಟದಲ್ಲಿ ಒಟ್ಟು ಎರಡು ಸ್ಥಾನಗಳು ಖಾಲಿ ಇದ್ದು, ಈ ಎರಡೂ ಸ್ಥಾನಗಳಿಗೆ ಹಲವು ಶಾಸಕರು ಲಾಬಿ ನಡೆಸುತ್ತಿದ್ದಾರೆ. ಸಚಿವ ಸ್ಥಾನ ಸಿಗದೆ ಅಸಮಾಧಾನಗೊಂಡಿರುವ ಹಿರಿಯ ಶಾಸಕರಿಗೆ ಈ ಹಿಂದೆ ನೀಡಲಾಗಿದ್ದ ಭರವಸೆಯನ್ನು ಈಡೇರಿಸಬೇಕೇ ಅಥವಾ ನಾಗೇಂದ್ರ ಅವರ ರಾಜೀನಾಮೆಯಿಂದ ತೆರವಾಗಿರುವ ಸ್ಥಾನವನ್ನು ವಾಲ್ಮೀಕಿ ಸಮುದಾಯಕ್ಕೆ ನೀಡಬೇಕೇ ಎಂಬ ವಿಚಾರದಲ್ಲಿ ಪಕ್ಷದೊಳಗೆ ಚರ್ಚೆ ನಡೆಯುತ್ತಿದೆ.

**ವಾಲ್ಮೀಕಿ ಸಮುದಾಯಕ್ಕೆ ಪ್ರಾತಿನಿಧ್ಯದ ಒತ್ತಡ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದ ಹಿನ್ನೆಲೆಯಲ್ಲಿ ನಾಗೇಂದ್ರ ರಾಜೀನಾಮೆ ನೀಡಿರುವುದರಿಂದ, ಅವರ ಸ್ಥಾನಕ್ಕೆ ವಾಲ್ಮೀಕಿ ಸಮುದಾಯದವರನ್ನೇ ಸಚಿವರನ್ನಾಗಿ ಮಾಡಬೇಕು ಎಂಬ ಒತ್ತಡ ಕಾಂಗ್ರೆಸ್‌ನಲ್ಲಿ ಹೆಚ್ಚಾಗಿದೆ.

ಜತೆಗೆ ರಾಜ್ಯ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸಮರ್ಪಕ ಪ್ರಾತಿನಿಧ್ಯ ಸಿಕ್ಕಿಲ್ಲ ಎಂಬ ಅಸಮಾಧಾನವೂ ಇದೆ. ಹೀಗಾಗಿ ಒಂದೇ ನೇಮಕದ ಮೂಲಕ ಮಹಿಳಾ ಹಾಗೂ ವಾಲ್ಮೀಕಿ ಸಮುದಾಯ ಎರಡಕ್ಕೂ ಪ್ರಾತಿನಿಧ್ಯ ಕಲ್ಪಿಸುವ ಸಾಧ್ಯತೆ ಕುರಿತು ಚರ್ಚೆ ನಡೆದಿದೆ.

ಈ ಹಿನ್ನೆಲೆಯಲ್ಲಿ ವಾಲ್ಮೀಕಿ ಸಮುದಾಯಕ್ಕೆ ಸೇರಿದ ಹಾಗೂ ಇತ್ತೀಚೆಗೆ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಅನ್ನಪೂರ್ಣ ತುಕರಾಂ ಅವರ ಹೆಸರೂ ಪ್ರಮುಖವಾಗಿ ಕೇಳಿಬರುತ್ತಿದೆ.

ಆದರೆ ಮೊದಲ ಬಾರಿಗೆ ಶಾಸಕರಾಗಿರುವ ಅವರಿಗೆ ತಕ್ಷಣ ಸಚಿವ ಸ್ಥಾನ ನೀಡುವುದಕ್ಕೆ ಪಕ್ಷದೊಳಗೇ ಕೆಲವರ ವಿರೋಧ ವ್ಯಕ್ತವಾಗಿದೆ.

ಎರಡು–ಮೂರು ಬಾರಿ ಗೆದ್ದಿರುವ ವಾಲ್ಮೀಕಿ ಸಮುದಾಯದ ಹಿರಿಯ ಶಾಸಕರಿಗೆ ಅವಕಾಶ ನೀಡಬೇಕು ಎಂಬ ಬೇಡಿಕೆಯೂ ಕೇಳಿಬಂದಿದೆ.

**ಕೃಷ್ಣಪ್ಪಗೆ ಸಚಿವ ಸ್ಥಾನ ನೀಡುವ ಒತ್ತಡ**

ಇದೇ ವೇಳೆ ಸಚಿವ ಸ್ಥಾನ ಸಿಗದೆ ಅಸಮಾಧಾನಗೊಂಡಿರುವ ಹಿರಿಯ ಶಾಸಕ ಎಂ. ಕೃಷ್ಣಪ್ಪ ಅವರನ್ನು ಸಂಪುಟಕ್ಕೆ ಸೇರ್ಪಡೆಗೊಳಿಸಬೇಕೆಂಬ ಒತ್ತಡವೂ ಮುಂದುವರಿದಿದೆ. ಎರಡನೇ ಹಂತದ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ಅಸಮಾಧಾನಗೊಂಡಿದ್ದ ಕೆಲವು ಹಿರಿಯ ಶಾಸಕರಿಗೆ ಮುಂದಿನ ಹಂತದಲ್ಲಿ ಸಚಿವ ಸ್ಥಾನ ನೀಡುವ ಭರವಸೆ ನೀಡಲಾಗಿತ್ತು. ಹೀಗಾಗಿ ಆ ಭರವಸೆ ಈಡೇರಿಸುವುದು ಪಕ್ಷದ ನಾಯಕತ್ವಕ್ಕೆ ಅನಿವಾರ್ಯವಾಗಿದೆ.

ಕೃಷ್ಣಪ್ಪ ಅವರಿಗೆ ಅವಕಾಶ ಕಲ್ಪಿಸಲು ಒಕ್ಕಲಿಗ ಸಮುದಾಯದ ಸಚಿವರೊಬ್ಬರಿಗೆ ರಾಜೀನಾಮೆ ಕೊಡಿಸುವ ಬಗ್ಗೆಯೂ ಹಿಂದೆ ಚರ್ಚೆ ನಡೆದಿತ್ತು ಎನ್ನಲಾಗಿದೆ. ಆದರೆ ಒಕ್ಕಲಿಗ ಸಮುದಾಯದ ಸಚಿವರು ರಾಜೀನಾಮೆ ನೀಡಲು ಹಿಂದೇಟು ಹಾಕಿರುವುದರಿಂದ ಆ ಸೂತ್ರವೂ ಸದ್ಯ ಕಗ್ಗಂಟಾಗಿದೆ.

**ಸಿದ್ದರಾಮಯ್ಯ ಬೆಂಬಲದ ಮತ್ತೊಂದು ಹೆಸರು**

ಖಾಲಿ ಇರುವ ಸ್ಥಾನಗಳಲ್ಲಿ ಒಂದು ಸ್ಥಾನವನ್ನು ಕುರುಬ ಸಮುದಾಯದ ಬಸವರಾಜ ನೀಲಣ್ಣ ಶಿವಣ್ಣ ಅವರಿಗೆ ನೀಡಬೇಕು ಎಂಬ ಬೇಡಿಕೆಯೂ ಪಕ್ಷದೊಳಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹೆಸರಿನ ಪರವಾಗಿ ಒತ್ತಡ ಹೇರಿದ್ದಾರೆ ಎನ್ನಲಾಗಿದೆ.

ಹೀಗಾಗಿ ಎರಡು ಸ್ಥಾನಗಳಿಗೆ ಹಲವು ಸಮುದಾಯಗಳು ಹಾಗೂ ಪ್ರಬಲ ಆಕಾಂಕ್ಷಿಗಳ ಹೆಸರುಗಳು ಮುನ್ನೆಲೆಗೆ ಬಂದಿರುವುದು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ವರಿಷ್ಠರಿಗೆ ತಲೆನೋವಾಗಿದೆ.

ಯಾರಿಗೆ ಸಚಿವ ಸ್ಥಾನ ನೀಡಬೇಕು, ಯಾರನ್ನು ಕೈಬಿಡಬೇಕು, ಮಹಿಳಾ ಪ್ರಾತಿನಿಧ್ಯವನ್ನು ಹೇಗೆ ಕಲ್ಪಿಸಬೇಕು, ಯಾವ ಸಮುದಾಯಕ್ಕೆ ಎಷ್ಟು ಪ್ರಾತಿನಿಧ್ಯ ನೀಡಬೇಕು ಹಾಗೂ ಪ್ರಾದೇಶಿಕ ಸಮತೋಲನ ಕಾಯ್ದುಕೊಳ್ಳುವುದು ಹೇಗೆ ಎಂಬ ವಿಚಾರಗಳ ಕುರಿತು ಕಾಂಗ್ರೆಸ್‌ನಲ್ಲಿ ತೀವ್ರ ಚರ್ಚೆ ನಡೆಯುತ್ತಿದೆ. 2ನೇ ಪುಟಕ್ಕೆ...





ಮೈಸೂರಿನ ಸುತ್ತೂರು ಶಾಖಾ ಮಠದಲ್ಲಿ ಶನಿವಾರ ನಡೆದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳ 111 ನೇ ಜಯಂತಿ ಮಹೋತ್ಸವವನ್ನು ಸಿಎಂ ಡಿ.ಕೆ. ಶಿವಕುಮಾರ್ ಅವರು ಉದ್ಘಾಟಿಸಿದರು. ಮಾಜಿ ಸಿಎಂ ಸಿದ್ದರಾಮಯ್ಯ ಅವರು, ಸಚಿವರಾದ ಪುಟ್ಟರಂಗಶೆಟ್ಟಿ, ಸುತ್ತೂರು ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಸಿದ್ದಗಂಗಾ ಕ್ಷೇತ್ರದ ಸಿದ್ದಲಿಂಗ ಮಹಾಸ್ವಾಮಿಗಳು, ವಿಶ್ವ ಒಕ್ಕಲಿಗರ ಮಹಾಸಂಸ್ಥಾನದ ನಿಶ್ಚಲಾನಂದನಾಥ ಮಹಾಸ್ವಾಮಿಗಳು, ಅವಧೂತ ದತ್ತ ಪೀಠದ ದತ್ತ ವಿಜಯಾನಂದ ತೀರ್ಥ ಮಹಾಸ್ವಾಮಿಗಳು, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ತನ್ವೀರ್ ಸೇಠ್, ಜಿ ಟಿ ದೇವೇಗೌಡ, ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ಎಚ್ ಎಂ ಗಣೇಶ್ ಪ್ರಸಾದ್, ಟಿ ಎಸ್ ಶ್ರೀವತ್ಸ, ಎ ಆರ್ ಕೃಷ್ಣಮೂರ್ತಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಸಿಗದ ಸಚಿವ ಸ್ಥಾನ–ಶಾಸಕ ಸ್ಥಾನ ತೊರೆಯುವಂತೆ ಒತ್ತಡ: ಟಿ.ಬಿ. ಜಯಚಂದ್ರ

● ವಿಕ್ರಮ ವಾಹಿನಿ | ಬೆಂಗಳೂರು



**ಸಚಿವ ಸಂಪುಟ ವಿಸ್ತರಣೆ ವಿಳಂಬಕ್ಕೆ ಹಿರಿಯ ಶಾಸಕ ಟಿ.ಬಿ. ಜಯಚಂದ್ರ ಅಸಮಾಧಾನ; ಸರ್ಕಾರದ ಕಾರ್ಯವೈಖರಿ ಹಾಗೂ ಸಚಿವರ ಆಡಳಿತಾತ್ಮಕ ಅನುಭವದ ಕೊರತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು. ರಾಜ್ಯದ ಹಲವು ಜ್ವಲಂತ ಸಮಸ್ಯೆಗಳನ್ನು ಸಮರ್ಥವಾಗಿ ನಿಭಾಯಿಸಲು ಅನುಭವ ಹಾಗೂ ಸಾಮರ್ಥ್ಯದ ಕೊರತೆ ಕಾಡುತ್ತಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕಿದರು.**

ಮತ್ತೆ ಸಚಿವ ಸಂಪುಟ ವಿಸ್ತರಣೆಯ ಬಗ್ಗೆ ಪ್ರಶ್ನಿಸಿರುವ ಕಾಂಗ್ರೆಸ್ ಹಿರಿಯ ಶಾಸಕ ಟಿ.ಬಿ.ಜಯಚಂದ್ರ ಸಚಿವರ ಆಡಳಿತಾತ್ಮಕ ಅನುಭವ ಮತ್ತು ರಾಜ್ಯ ಸರ್ಕಾರದ ಕಾರ್ಯವೈಖರಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ಸಂಪುಟ ವಿಸ್ತರಣೆ ಬಗ್ಗೆ ರಾಜ್ಯದ ಮತದಾರರು ಹಾಗೂ ಅವರ ಕ್ಷೇತ್ರದ ಜನರು ಪ್ರಶ್ನಿಸುತ್ತಿದ್ದಾರೆ, ತಮ್ಮ ಕ್ಷೇತ್ರಕ್ಕೆ ರಾಜೀನಾಮೆ ನೀಡಿ ಸರ್ಕಾರದಿಂದ ಹೊರಬರುವಂತೆ ಸಮುದಾಯದ ಜನರು ಒತ್ತಾಯಿಸುತ್ತಿದ್ದಾರೆ ಎಂದು ಹೇಳಿದರು.

ಕರ್ನಾಟಕ ಕಾಂಗ್ರೆಸ್‌ನ ಹಿರಿಯ ನಾಯಕರಲ್ಲಿ ಒಬ್ಬರಾದ ಜಯಚಂದ್ರ, ಪಕ್ಷದೊಂದಿಗಿನ ತಮ್ಮ ದೀರ್ಘ ಸಂಬಂಧ ಮತ್ತು ಶಾಸಕರಾಗಿ ತಮ್ಮ ಅನುಭವ ಹಂಚಿಕೊಂಡಿದ್ದಾರೆ. ನಾನು 1978 ರಿಂದ ಶಾಸಕರಾಗಿ ಸೇವೆ ಸಲ್ಲಿಸಿದ್ದೇನೆ, ನನ್ನ ರಾಜಕೀಯ ಜೀವನದಲ್ಲಿ ಗಾಂಧಿ ಕುಟುಂಬದ ನಾಲ್ಕು ತಲೆಮಾರುಗಳನ್ನು ಕಂಡಿದ್ದೇನೆ ಎಂದು ಹೇಳಿದರು.

ನಾನು ಸುಮಾರು 56 ವರ್ಷಗಳ ಹಿಂದೆ ಕಾಂಗ್ರೆಸ್ ಸೇರಿದ್ದೆ. ನಾನು 1978 ರಲ್ಲಿ ಶಾಸಕನಾಗಿದ್ದೆ. ಇದು ಶಾಸಕನಾಗಿ ನನ್ನ 49 ನೇ ವರ್ಷ. ಇಂದಿರಾ ಗಾಂಧಿ ನನ್ನ ಚುನಾವಣಾ ಪ್ರಚಾರಕ್ಕಾಗಿ ಬಂದರು, ರಾಜೀವ್ ಗಾಂಧಿ ಬಂದರು, ಸೋನಿಯಾ ಗಾಂಧಿ ಬಂದರು, ರಾಹುಲ್ ಗಾಂಧಿ ಬಂದರು.

ನಾನು ಸೋಲನ್ನು ಸಹ ಎದುರಿಸಿದ್ದೇನೆ ಮತ್ತು ಚುನಾವಣೆಗಳನ್ನು ಗೆದ್ದಿದ್ದೇನೆ. ಮಲ್ಲಿಕಾರ್ಜುನ ಖರ್ಗೆ ನಂತರ, ನಾನು ಕರ್ನಾಟಕದ ಅತ್ಯಂತ ಹಿರಿಯ ವ್ಯಕ್ತಿ. ಆದರೆ ಇನ್ನೂ, ಅವರು ನನ್ನ ಕ್ಷೇತ್ರದ ಮತದಾರರ ಆಕಾಂಕ್ಷೆಗಳನ್ನು ಈಡೇರಿಸಲು ಸಾಧ್ಯವಾಗುತ್ತಿಲ್ಲ. ಅವರು (ನನ್ನ ಅನುಭವ) ಬಳಸಿಕೊಳ್ಳುತ್ತಿಲ್ಲ. "ನಾನು ದೆಹಲಿಯಲ್ಲೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದೇನೆ ಎಂದಿದ್ದಾರೆ. ಪ್ರಸ್ತಾವಿತ ಸಚಿವ ಸಂಪುಟದಲ್ಲಿನ ಆಡಳಿತಾತ್ಮಕ ಅನುಭವವನ್ನು ಪ್ರಶ್ನಿಸಿದ ಜಯಚಂದ್ರ, ರಾಜ್ಯ ಸರ್ಕಾರದ ಕಾರ್ಯವೈಖರಿಯನ್ನು ಟೀಕಿಸಿದರು ಮತ್ತು ಕರ್ನಾಟಕ ಕಾವೇರಿ ವಿವಾದ ಮತ್ತು ಬರ ಸೇರಿದಂತೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದೆ ಎಂದು ಹೇಳಿದರು.

ಇಲ್ಲ, ಇದು ಕಾಂಗ್ರೆಸ್ ಸರ್ಕಾರದಂತೆ ಕಾಣುತ್ತಿಲ್ಲ; ಇದು ಸರ್ವಪಕ್ಷ ಸರ್ಕಾರದಂತೆ ಕಾಣುತ್ತಿದೆ. ಅನುಭವದ ಕೊರತೆ, ಸಾಮರ್ಥ್ಯದ ಕೊರತೆ... ಅವರು ಆಡಳಿತ ನಡೆಸಲು ವಿಫಲರಾಗಿದ್ದಾರೆ. ರಾಜ್ಯವು ಹಲವು ಸಮಸ್ಯೆಗಳನ್ನು ಎದುರಿಸುತ್ತಿದೆ ಎಂದಿದ್ದಾರೆ. ಆದರೆ ಸಮರ್ಥವಾಗಿ ಸರ್ಕಾರ ಅವುಗಳನ್ನು ನಿಭಾಯಿಸುತ್ತಿಲ್ಲ ಎಂದರು.

## 'ಹೆಗಡೆ ಹೆಸರಿನಲ್ಲಿ ಮೆಡಿಕಲ್ ಕಾಲೇಜು, ರಸ್ತೆಗೆ ನಾಮಕರಣ'

● ವಿಕ್ರಮ ವಾಹಿನಿ | ಬೆಂಗಳೂರು

ಮಾಜಿ ಮುಖ್ಯಮಂತ್ರಿ ದಿವಂಗತ ರಾಮಕೃಷ್ಣ ಹೆಗಡೆ ಅವರ ಹೆಸರು ಹಾಗೂ ಕೊಡುಗೆಯನ್ನು ಶಾಶ್ವತಗೊಳಿಸಲು ರಾಜ್ಯ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಹೆಗಡೆ ಜನ್ಮ ಶತಮಾನೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಉತ್ತರ ಕನ್ನಡದಲ್ಲಿ ನಿರ್ಮಾಣವಾಗುತ್ತಿರುವ ಮೆಡಿಕಲ್ ಕಾಲೇಜಿಗೆ ಹೆಗಡೆ ಅವರ ಹೆಸರಿಡಲಾಗುವುದು. ಬೆಂಗಳೂರಿನ ಶಿವರಾಮ ಕಾರಂತ ಬಡಾವಣೆಯ ಪ್ರಮುಖ ರಸ್ತೆಯೊಂದಕ್ಕೂ ಅವರ ಹೆಸರಿಡಲು ತೀರ್ಮಾನಿಸಲಾಗಿದೆ ಎಂದರು.



ಗ್ರಾಮೀಣ ಆಡಳಿತಕ್ಕೆ ಹೆಗಡೆ ನೀಡಿದ ಕೊಡುಗೆಯನ್ನು ಸ್ಮರಿಸುವ ಸಲುವಾಗಿ ಪ್ರತಿ ವರ್ಷ ಅವರ ಜನ್ಮದಿನದಂದು 'ರಾಮಕೃಷ್ಣ ಹೆಗಡೆ ಶ್ರೇಷ್ಠ ಪಂಚಾಯಿತಿ ಪ್ರಶಸ್ತಿ' ನೀಡಲಾಗುವುದು. ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಗ್ರಾಮ ಪಂಚಾಯಿತಿಯನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು ಎಂದು ತಿಳಿಸಿದರು.

ಹೆಗಡೆ ಅವರು ಕೇವಲ ಅಧಿಕಾರ ನಡೆಸಿದ ನಾಯಕನಲ್ಲ, ಪಂಚಾಯಿತಿಯಿಂದ ಸಂಸತ್ತಿನವರೆಗೆ ನಾಯಕರನ್ನು ಸೃಷ್ಟಿಸಿದ ನಾಯಕ. ಅವರ ಪಂಚಾಯತ್ ರಾಜ್ ಪರಿಕಲ್ಪನೆ ದೇಶಕ್ಕೆ ಮಾದರಿಯಾಗಿದ್ದು, ಬಳಿಕದ 73 ಮತ್ತು 74ನೇ ಸಂವಿಧಾನ ತಿದ್ದುಪಡಿಗಳಿಗೆ ಪ್ರೇರಣೆಯಾಯಿತು ಎಂದು ಶಿವಕುಮಾರ್ ಹೇಳಿದರು. ಮೌಲ್ಯಾಧಾರಿತ ರಾಜಕಾರಣ, ಸಾಮಾಜಿಕ ನ್ಯಾಯ ಹಾಗೂ ಜನಸೇವೆಗೆ ಹೆಗಡೆ ಆದ್ಯತೆ ನೀಡಿದ್ದರು. ಕರ್ನಾಟಕದಲ್ಲಿ ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಶಿಕ್ಷಣದ ವಿಸ್ತರಣೆಯಲ್ಲೂ ಅವರ ನೀತಿಗಳ ಪಾತ್ರ ಮಹತ್ವದ್ದಾಗಿದೆ. ಇಂದು ವಿವಿಧ ಪಕ್ಷಗಳಲ್ಲಿರುವ ಹಲವು ನಾಯಕರು ಹೆಗಡೆ ಅವರ ರಾಜಕೀಯ ಶಾಲೆಯಲ್ಲಿ ಬೆಳೆದವರು ಎಂದರು. ಹೆಗಡೆ ಅವರ ಆದರ್ಶ, ಅಭಿವೃದ್ಧಿ ಚಿಂತನೆ ಮತ್ತು ಸಾರ್ವಜನಿಕ ಬದುಕಿನ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಸರ್ಕಾರದ ಉದ್ದೇಶವಾಗಿದೆ. ಅಧಿಕಾರವನ್ನು ಜನಸೇವೆಗೆ ದೊರೆತ ಅವಕಾಶವೆಂದು ಪರಿಗಣಿಸಿದ್ದ ಅವರ ಜೀವನ ಇಂದಿನ ರಾಜಕಾರಣಿಗಳಿಗೆ ದಾರಿದೀಪವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.


## ಸ್ಮಾರ್ಟ್‌ಫೋನ್‌ಗಾಗಿ ನಾಲ್ವರು ಸಹೋದರಿಯರ ಓಟ..!

● ವಿಕ್ರಮ ವಾಹಿನಿ | ಅಹಮದಾಬಾದ್

*ಸ್ಮಾರ್ಟ್‌ಫೋನ್ ವಿಚಾರವಾಗಿ ತಂದೆಯ ಕೋಪಕ್ಕೆ ಗುರಿಯಾಗುವ ಭಯದಿಂದ ನಾಲ್ವರು ಸಹೋದರಿಯರು ಗುಜರಾತ್‌ನ ಸೂರತ್‌ನಿಂದ ಕರ್ನಾಟಕಕ್ಕೆ ಪರಾರಿಯಾದ ಘಟನೆ ನಡೆದಿದೆ. ಆರಂಭದಲ್ಲಿ ಇದನ್ನು ಅಪಹರಣ ಪ್ರಕರಣವೆಂದು ಶಂಕಿಸಿದ್ದ ಪೊಲೀಸರು, ತನಿಖೆ ಬಳಿಕ ಯುವತಿಯರು ಸ್ವಯಂ ಮನೆಬಿಟ್ಟು ತೆರಳಿರುವುದು ಖಚಿತಪಡಿಸಿಕೊಂಡಿದ್ದಾರೆ.*

*ಸೂರತ್‌ನ ಪುನಾಗಮ್ ಪ್ರದೇಶದಲ್ಲಿ ನಾಲ್ವರು ಸಹೋದರಿಯರು ನಾಪತ್ತೆಯಾಗಿರುವ ಕುರಿತು ಕುಟುಂಬದವರು ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಸಿಸಿಟಿವಿ ದೃಶ್ಯಾವಳಿ, ಮೊಬೈಲ್ ಸ್ಥಳ ಮಾಹಿತಿ ಹಾಗೂ ತಾಂತ್ರಿಕ ಕಣ್ಗಾವಲಿನ ಮೂಲಕ ಶೋಧ ಆರಂಭಿಸಿದ್ದರು.*

*ತನಿಖೆಯ ಪ್ರಕಾರ, 16 ವರ್ಷದ ಬಾಲಕಿಗೆ ವೈಯಕ್ತಿಕ ಸ್ಮಾರ್ಟ್‌ಫೋನ್ ಬೇಕಾಗಿತ್ತು. ಈ ವಿಚಾರದಲ್ಲಿ ತಂದೆ ಆಕೆಯನ್ನು ಗದರಿಸಿದ್ದು, ಮನೆಗೆ ಮರಳಿದ ಬಳಿಕ ಪರಿಣಾಮ ಎದುರಿಸಬೇಕಾಗುತ್ತದೆ*




*ಎಂದು ಎಚ್ಚರಿಸಿದ್ದರು ಎನ್ನಲಾಗಿದೆ. ತಂದೆಯ ಕೋಪ ಹಾಗೂ ಹೊಡೆಯುವ ಭೀತಿಯಿಂದ ಆಕೆ ತನ್ನ 15 ವರ್ಷದ ಸಹೋದರಿ ಮತ್ತು 17 ಹಾಗೂ 23 ವರ್ಷದ ಇಬ್ಬರು ಸಂಬಂಧಿಕರೊಂದಿಗೆ ಮನೆ ತೊರೆಯಲು ನಿರ್ಧರಿಸಿದ್ದಳು.*

*ನಾಲ್ವರು ಯುವತಿಯರು ತಾವು ಕೆಲಸ ಮಾಡುತ್ತಿದ್ದ ಕಾರ್ಖಾನೆಯಿಂದ ಸುಮಾರು ರೂ 1,000 ಮುಂಗಡ ಪಡೆದು, ತಮ್ಮ ಉಳಿತಾಯದ ಹಣ ಸೇರಿಸಿ ಒಟ್ಟು ರೂ 2,000– ರೂ 2,500 ಹಣದೊಂದಿಗೆ ಸೂರತ್ ರೈಲು ನಿಲ್ದಾಣ ತಲುಪಿದ್ದರು. ಅಲ್ಲಿಂದ ಅಹಮದಾಬಾದ್‌ಗೆ ತೆರಳಿ ಕಂಕರಿಯಾ ಸರೋವರ ಪ್ರದೇಶದಲ್ಲಿ ಸಮಯ ಕಳೆದ ಬಳಿಕ ಕಲುಪುರ ರೈಲು ನಿಲ್ದಾಣದಿಂದ ಕರ್ನಾಟಕದತ್ತ ತೆರಳುತ್ತಿದ್ದ ರೈಲು ಹತ್ತಿದ್ದರು.*

*ಈ ನಡುವೆ ತನಿಖೆ ನಡೆಸಿದ ಪೊಲೀಸರು, ನಾಲ್ವರು ಕರ್ನಾಟಕದತ್ತ ಪ್ರಯಾಣಿಸುತ್ತಿರುವುದನ್ನು ಪತ್ತೆಹಚ್ಚಿ ರೈಲ್ವೆ ಹಾಗೂ ಆರ್‌ಪಿಎಫ್ ಅಧಿಕಾರಿಗಳಿಗೆ ಮಾಹಿತಿ ನೀಡಿದರು. ಬಳಿಕ ಕಲಬುರಗಿ ರೈಲು ನಿಲ್ದಾಣದಲ್ಲಿ ರೈಲನ್ನು ತಡೆದು ನಾಲ್ವರು ಸಹೋದರಿಯರನ್ನು ಸುರಕ್ಷಿತವಾಗಿ ವಶಕ್ಕೆ ಪಡೆಯಲಾಯಿತು.*

*ನಂತರ ಅವರನ್ನು ಕುಟುಂಬದವರಿಗೆ ಒಪ್ಪಿಸಲಾಗಿದ್ದು, ಪ್ರಕರಣ ಅಪಹರಣವಲ್ಲ, ತಂದೆಯ ಭಯದಿಂದ ಮನೆ ತೊರೆದ ಘಟನೆ ಎಂಬುದು ತನಿಖೆಯಿಂದ ಸ್ಪಷ್ಟವಾಗಿದೆ. ಪೊಲೀಸರ ತ್ವರಿತ ಕಾರ್ಯಾಚರಣೆಯಿಂದ ನಾಲ್ವರು ಯುವತಿಯರು ಸುರಕ್ಷಿತವಾಗಿ ಪತ್ತೆಯಾಗಿದ್ದು, ಕುಟುಂಬದವರ ಆತಂಕ ದೂರವಾಗಿದೆ.*

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ

### ಸವಿ ವಾಹಿನಿ

ದೇವರು ವರವನ್ನೂ ಕೊಡುವುದಿಲ್ಲ. ಶಾಪವನ್ನೂ ಕೊಡುವುದಿಲ್ಲ. ಅವಕಾಶವನ್ನು ಮಾತ್ರ ಕೊಡುತ್ತಾನೆ. ಅದನ್ನು ವರವೋ, ಶಾಪವೋ ಆಗಿ ಪರಿವರ್ತಿಸುವುದು ನಮ್ಮ ಕೈಯಲ್ಲಿದೆ.

### ದಿನ ಪಂಚಾಂಗ

ಆಗಸ್ಟ್, 30-2026, ಭಾನುವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ಬಿದಿಗೆ ತಿಥಿ ಬೆ-09:15
ಉತ್ತರಾಭಾದ್ರ ನಕ್ಷತ್ರ ರಾ-04:42
ರಾಹುಕಾಲ ಸಾ-04:58-06:31
ರಾಘವೇಂದ್ರಸ್ವಾಮಿ ಆರಾಧನೆ, ಉಡುಪಿ ಆರಾಧನೆ, ಶಂಕರಲಿಂಗ ಭಗವಾನ್ ಜಯಂತಿ, ಕೂಡಲಿ ವಿದ್ಯಾಭಿನವ ನೃಸಿಂಹ ಭಾರತೀ ವರ್ಧಂತಿ, ಕೋಡಿಮಠದಲ್ಲಿ ಮಹಾಮಂಗಳಾರತಿ, ಬಳ್ಳಾರಿ । ಗೋಟೂರ ಬಸವೇಶ್ವರ ಜಾತ್ರೆ, ಬಳ್ಳಾರಿ । ಸಿದ್ದಮ್ಮನಹಳ್ಳಿ ಆಂಜನೇಯಸ್ವಾಮಿ ಉತ್ಸವ

### ಆರೋಗ್ಯ

## ನೋನಿ ಹಣ್ಣಿನ ಆರೋಗ್ಯ ಗುಟ್ಟು

ಹೊರನೋಟಕ್ಕೆ ಸಾಮಾನ್ಯ ಹಣ್ಣಿನಂತೆಯೇ ಕಂಡರೂ, ಪಕ್ವವಾದಾಗ ವಿಶಿಷ್ಟ ಹಾಗೂ ತೀವ್ರ ವಾಸನೆ ಬೀರುವ ನೋನಿ ಹಣ್ಣು ಇತ್ತೀಚಿನ ವರ್ಷಗಳಲ್ಲಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವವರ ಗಮನ ಸೆಳೆಯುತ್ತಿದೆ. ನೋನಿ ಜ್ಯೂಸ್, ಎಕ್ಸ್‌ಟ್ರಾಕ್ಟ್ ಹಾಗೂ ವಿವಿಧ ಪೂರಕ ಉತ್ಪನ್ನಗಳು ಮಾರುಕಟ್ಟೆಯಲ್ಲಿ ಲಭ್ಯವಿದ್ದು, ಹಲವು ಆರೋಗ್ಯ ಪ್ರಯೋಜನಗಳಿವೆ ಎಂಬ ಪ್ರಚಾರವೂ ಇದೆ. ಆದರೆ ನೋನಿಯ ಬಗ್ಗೆ ಕೇಳಿಬರುವ ಎಲ್ಲ ಆರೋಗ್ಯದ ಹೇಳಿಕೆಗಳಿಗೆ ವೈಜ್ಞಾನಿಕವಾಗಿ ದೃಢವಾದ ಪುರಾವೆಗಳಿವೆಯೇ ಎಂಬುದು ಮುಖ್ಯ ಪ್ರಶ್ನೆಯಾಗಿದೆ.



ನೋನಿ ಹಣ್ಣು Morinda citrifolia ಎಂಬ ಸಸ್ಯದಿಂದ ದೊರೆಯುತ್ತದೆ. ದಕ್ಷಿಣ ಮತ್ತು ಆಗ್ನೇಯ ಏಷ್ಯಾ, ಪೆಸಿಫಿಕ್ ದ್ವೀಪಗಳು ಹಾಗೂ ಆಸ್ಟ್ರೇಲಿಯಾದ ಕೆಲವು ಭಾಗಗಳಲ್ಲಿ ಇದು ಕಂಡುಬರುತ್ತದೆ. ಹಣ್ಣು ಸಾಮಾನ್ಯವಾಗಿ ಹಸಿರು ಅಥವಾ ಬಿಳಿ ಬಣ್ಣದಲ್ಲಿದ್ದು, ಹಣ್ಣಾದಂತೆ ವಿಶಿಷ್ಟ ವಾಸನೆ ಪಡೆಯುತ್ತದೆ. ಕೆಲವು ಸಾಂಪ್ರದಾಯಿಕ ಚಿಕಿತ್ಸಾ ಪದ್ಧತಿಗಳಲ್ಲಿ ನೋನಿ ಹಣ್ಣು, ಎಲೆ ಮತ್ತು ಬೇರುಗಳನ್ನು ಬಳಸಿಕೊಂಡು ಬಂದಿದ್ದಾರೆ. ಇತ್ತೀಚೆಗೆ ನೋನಿ ಜ್ಯೂಸ್ ಮತ್ತು ಸಪ್ಲಿಮೆಂಟ್‌ಗಳ ರೂಪದಲ್ಲಿ ಇದರ ಬಳಕೆ ಹೆಚ್ಚಾಗಿದೆ.

ನೋನಿ ಉತ್ಪನ್ನಗಳು ರಕ್ತದೊತ್ತಡದ ಮೇಲೆ ಪರಿಣಾಮ ಬೀರುತ್ತವೆಯೇ ಎಂಬ ಕುರಿತು ಕೆಲವು ಸಣ್ಣ ಪ್ರಮಾಣದ ಅಧ್ಯಯನಗಳು ನಡೆದಿವೆ. ಆದರೆ ಇದರ ಆಧಾರದ ಮೇಲೆ ನೋನಿ ಜ್ಯೂಸ್‌ನ್ನು ರಕ್ತದೊತ್ತಡದ ಔಷಧಿಗೆ ಪರ್ಯಾಯವಾಗಿ ಪರಿಗಣಿಸಲು ಸಾಧ್ಯವಿಲ್ಲ. ಹೈಬಿಪಿ ಇರುವವರು ವೈದ್ಯರು ಸೂಚಿಸಿರುವ ಔಷಧಿ ಹಾಗೂ ಆಹಾರ ಕ್ರಮವನ್ನು ಮುಂದುವರಿಸಬೇಕು.

ನೋನಿ ಜ್ಯೂಸ್‌ನ್ನು ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸಿದರೆ ಹೆಚ್ಚಿನ ಪ್ರಯೋಜನ ಸಿಗುತ್ತದೆ ಎಂಬ ನಂಬಿಕೆ ಇದೆ. ಆದರೆ ಖಾಲಿ ಹೊಟ್ಟೆಯಲ್ಲಿ ಸೇವನೆಯಿಂದ ಹೆಚ್ಚುವರಿ ಆರೋಗ್ಯ ಪ್ರಯೋಜನ ದೊರೆಯುತ್ತದೆ ಎಂಬುದಕ್ಕೆ ದೃಢವಾದ ವೈಜ್ಞಾನಿಕ ಸಾಕ್ಷ್ಯವಿಲ್ಲ. ಸೇವಿಸುವವರು ಉತ್ಪನ್ನದ ಲೇಬಲ್‌ನಲ್ಲಿ ಸೂಚಿಸಿರುವ ಪ್ರಮಾಣವನ್ನು ಪಾಲಿಸುವುದು ಸೂಕ್ತ. ಹೆಚ್ಚು ಪ್ರಮಾಣ ಸೇವಿಸಿದರೆ ಹೆಚ್ಚಿನ ಲಾಭ ಸಿಗುತ್ತದೆ ಎಂಬುದಿಲ್ಲ.

ನೋನಿ ಉತ್ಪನ್ನಗಳಲ್ಲಿ ಪೊಟ್ಯಾಸಿಯಂ ಇರಬಹುದಾದ ಕಾರಣ ಕಿಡ್ನಿ ಸಮಸ್ಯೆ ಇರುವವರು ವಿಶೇಷ ಎಚ್ಚರ ವಹಿಸಬೇಕು. ಕೆಲವು ವರದಿಗಳಲ್ಲಿ ಹೆಚ್ಚಿನ ಪ್ರಮಾಣದ ನೋನಿ ಜ್ಯೂಸ್ ಸೇವನೆಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳ ಬಗ್ಗೆ ಎಚ್ಚರಿಸಲಾಗಿದೆ. ಅಲ್ಲದೆ, ಬಿಪಿ, ಕಿಡ್ನಿ, ಲಿವರ್ ಸೇರಿದಂತೆ ದೀರ್ಘಕಾಲೀನ ಸಮಸ್ಯೆಗಳಿಗೆ ಔಷಧಿ ಸೇವಿಸುವವರು ನೋನಿ ಜ್ಯೂಸ್ ಅಥವಾ ಸಪ್ಲಿಮೆಂಟ್ ಬಳಸುವ ಮೊದಲು ವೈದ್ಯರ ಸಲಹೆ ಪಡೆಯುವುದು ಅಗತ್ಯ.

# ಶ್ರೀರಾಘವೇಂದ್ರ ಗುರು ಸಾರ್ವಭೌಮರ ಆರಾಧನಾ ಮಹೋತ್ಸವ

## ಮೂರು ದಿನಗಳ ಕಾಲ ವಿಶೇಷ ಪೂಜೆ, ಭಜನೆ; ಭಕ್ತರಿಂದ ಶ್ರದ್ಧಾಭಕ್ತಿ ಸಮರ್ಪಣೆ

● ವಿಕ್ರಮ ವಾಹಿನಿ । ಬೆಂಗಳೂರು


ಕಲಿಯುಗದ ಕಾಮಧೇನು, ಕಲ್ಪವೃಕ್ಷ ಹಾಗೂ ಭಕ್ತರ ಪಾಲಿನ ಕರುಣಾಸಾಗರ ಎಂದೇ ಪ್ರಸಿದ್ಧರಾದ ಶ್ರೀರಾಘವೇಂದ್ರ ತೀರ್ಥ ಗುರು ಸಾರ್ವಭೌಮರ ಆರಾಧನಾ ಮಹೋತ್ಸವಕ್ಕೆ ಭಕ್ತರು ಸಜ್ಜಾಗಿದ್ದಾರೆ. ಇಂದಿನಿಂದ ಮೂರು ದಿನಗಳ ಕಾಲ ಪೂರ್ವಾರಾಧನೆ, ಮಧ್ಯಾರಾಧನೆ ಹಾಗೂ ಉತ್ತರಾರಾಧನೆಗಳನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ.

ಶ್ರೀರಾಘವೇಂದ್ರರು ನೊಂದವರ ನೋವಿಗೆ ಸಾಂತ್ವನವಾಗಿ, ನಿರ್ಗತಿಕರಿಗೆ ನೆಲೆಯಾಗಿ, ತಮ್ಮನ್ನು ನಂಬಿದ ಭಕ್ತರಿಗೆ ಬೆನ್ನೆಲುಬಾಗಿ ನಿಂತ ಮಹಾನ್ ಗುರು ಎಂದು ಭಕ್ತರು ಸ್ಮರಿಸುತ್ತಾರೆ.

ಅವರ ಆರಾಧನಾ ಪರ್ವದ ಸಂದರ್ಭದಲ್ಲಿ ವಿಶೇಷ ಪೂಜೆ, ಭಜನೆ, ಪಾರಾಯಣ ಹಾಗೂ ಸೇವಾ ಕಾರ್ಯಕ್ರಮಗಳ ಮೂಲಕ ಗುರುರಾಯರ ಅನುಗ್ರಹವನ್ನು ಕೋರಲಾಗುತ್ತಿದೆ.

ಶ್ರೀಹಂಸನಾಮಕ ಪರಮಾತ್ಮನಿಂದ ಆರಂಭಗೊಂಡ ಮಾಧ್ವ ಪರಂಪರೆಯಲ್ಲಿ ಶ್ರೀಮದಾನಂದತೀರ್ಥರು, ಶ್ರೀಜಯತೀರ್ಥರು, ಶ್ರೀವ್ಯಾಸತೀರ್ಥರು ಹಾಗೂ ಶ್ರೀವಿಜಯೀಂದ್ರತೀರ್ಥರಂತಹ ಮಹನೀಯರ ಬಳಿಕ ಶ್ರೀರಾಘವೇಂದ್ರತೀರ್ಥರು ಪರಂಪರೆಯನ್ನು ಮತ್ತಷ್ಟು ಶ್ರೀಮಂತಗೊಳಿಸಿದರು. ಅವರ ಆಧ್ಯಾತ್ಮಿಕ ಸಾಧನೆ, ವೇದಾಂತ ಜ್ಞಾನ ಹಾಗೂ ಲೋಕಕಲ್ಯಾಣದ ಕಾರ್ಯಗಳು ಅವರನ್ನು ಭಕ್ತರ ಆರಾಧ್ಯ ಗುರುವಾಗಿ ರೂಪಿಸಿವೆ.






ಕ್ರಿ.ಶ. 1595ರಲ್ಲಿ ವೆಂಕಟನಾಥಾಚಾರ್ಯರಾಗಿ ಜನಿಸಿದ ಶ್ರೀರಾಘವೇಂದ್ರರು, ಶ್ರೀವಿಜಯೀಂದ್ರ ತೀರ್ಥರು ಮತ್ತು ಶ್ರೀಸುಧೀಂದ್ರತೀರ್ಥರಿಂದ ವಿದ್ಯಾಭ್ಯಾಸ ಪಡೆದರು. ಸರಸ್ವತಿಬಾಯಿಯನ್ನು ವಿವಾಹವಾಗಿ ಗೃಹಸ್ಥಾಶ್ರಮದಲ್ಲಿದ್ದ ಅವರು, ಬಳಿಕ ಕ್ರಿ.ಶ. 1621ರಲ್ಲಿ ಶ್ರೀಸುಧೀಂದ್ರತೀರ್ಥರಿಂದ ಸನ್ಯಾಸಾಶ್ರಮ ಸ್ವೀಕರಿಸಿ 'ಶ್ರೀರಾಘವೇಂದ್ರತೀರ್ಥ' ಎಂಬ ಅಭಿದಾನ ಪಡೆದರು.

ಸುಮಾರು ಐದು ದಶಕಗಳ ಕಾಲ ವೇದಾಂತ ಸಾಮ್ರಾಜ್ಯವನ್ನು ಮುನ್ನಡೆಸಿದ ಅವರು, ಭಕ್ತಿ, ಜ್ಞಾನ ಹಾಗೂ ಧರ್ಮಪ್ರಚಾರದ ಮೂಲಕ ಅಪಾರ ಜನಪ್ರಿಯತೆ ಗಳಿಸಿದರು. ಕ್ರಿ.ಶ. 1671ರ ಶ್ರಾವಣ ಬಹುಳ ಬಿದಿಗೆಯಂದು ತುಂಗಭದ್ರಾ ನದಿ ತೀರದ ಮಂಚಾಲೆ ಗ್ರಾಮದಲ್ಲಿ ನಿರ್ಮಿಸಲಾದ ವೃಂದಾವನದಲ್ಲಿ ಸಶರೀರವಾಗಿ ಪ್ರವೇಶಿಸಿದರು ಎಂಬುದು ಮಂತ್ರಾಲಯ ಪರಂಪರೆಯ ನಂಬಿಕೆಯಾಗಿದೆ. ಇದೇ ದಿನವನ್ನು ಪ್ರತಿವರ್ಷ 'ಆರಾಧನೆ'ಯಾಗಿ ಆಚರಿಸಲಾಗುತ್ತದೆ.

ಶ್ರೀರಾಘವೇಂದ್ರರ ಮಹಿಮೆಗೆ ಸಂಬಂಧಿಸಿದ ಅನೇಕ ಪವಾಡಗಳು ಭಕ್ತರ ನಂಬಿಕೆಯಲ್ಲಿ ಇಂದಿಗೂ ಜೀವಂತವಾಗಿವೆ.

ಬ್ರಿಟಿಷ್ ಅಧಿಕಾರಿ ಸರ್ ಥಾಮಸ್ ಮುನ್ರೋ ಅವರಿಗೆ ವೃಂದಾವನದಿಂದ ದರ್ಶನ ನೀಡಿ ಮಂತ್ರಾಕ್ಷತೆ ಅನುಗ್ರಹಿಸಿದ ಘಟನೆ ಸೇರಿದಂತೆ ಹಲವು ಪ್ರಸಂಗಗಳು ರಾಯರ ಮಹಿಮೆಯನ್ನು ಸಾರುತ್ತವೆ.

ಶ್ರೀರಾಘವೇಂದ್ರರನ್ನು ಶಂಖುಕರ್ಣನ ಅವತಾರ ಪರಂಪರೆಯಲ್ಲಿ ಪ್ರಹ್ಲಾದ, ಬಾಹ್ಲೀಕರಾಜ, ಶ್ರೀವ್ಯಾಸತೀರ್ಥ ಹಾಗೂ ಅಂತಿಮವಾಗಿ ಶ್ರೀರಾಘವೇಂದ್ರತೀರ್ಥರಾಗಿ ಅವತರಿಸಿದ ಮಹಾತ್ಮ



ರೆಂದು ಮಾಧ್ವ ಪರಂಪರೆ ಗೌರವಿಸುತ್ತದೆ. ಅವರ ಉಪಾಸ್ಯಮೂರ್ತಿಯಾದ ಮುಖ್ಯಪ್ರಾಣಾಂತರ್ಗತ ಶ್ರೀಮನ್ಮೂಲರಾಮದೇವರ ಅನುಗ್ರಹದಿಂದ ಭಕ್ತರಿಗೆ ಸಕಲ ಸನ್ಮಂಗಳ ದೊರೆಯಲಿ ಎಂಬುದು ಈ ಸಂದರ್ಭದಲ್ಲಿ ಭಕ್ತರ ಪ್ರಾರ್ಥನೆಯಾಗಿದೆ.

"ಪೂಜ್ಯಾಯ ರಾಘವೇಂದ್ರಾಯ ಸತ್ಯಧರ್ಮ ರತಾಯ ಚ, ಭಜತಾಂ ಕಲ್ಪವೃಕ್ಷಾಯ ನಮತಾಂ ಕಾಮಧೇನುವೇ" ಎಂಬ ಸ್ತೋತ್ರದೊಂದಿಗೆ ಗುರುರಾಯರನ್ನು ಸ್ಮರಿಸುತ್ತಿರುವ ಭಕ್ತರು, ಮೂರು ದಿನಗಳ ಆರಾಧನಾ ಮಹೋತ್ಸವದಲ್ಲಿ ವಿಶೇಷವಾಗಿ ಪೂಜೆ ಸಲ್ಲಿಸಿ, ರಾಯರ ಕೃಪೆಗೆ ಪಾತ್ರರಾಗುವ ಸಂಕಲ್ಪ ಮಾಡಿದ್ದಾರೆ.

ಆರಾಧನಾ ಮಹೋತ್ಸವದ ಅಂಗವಾಗಿ ನಗರದ ವಿವಿಧ ರಾಯರ ಮಠಗಳಲ್ಲಿ ವಿಶೇಷ ಅಲಂಕಾರ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಅನ್ನಸಂತರ್ಪಣೆ ಆಯೋಜಿಸಲಾಗಿದೆ.



**ಬೆಂಗಳೂರಿನ ಬಸವನಗುಡಿಯ ತ್ಯಾಗರಾಜ ನಗರ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ಆರಂಭವಾಯಿತು. ಮಂತ್ರಾಲಯ ಪೀಠಾಧಿಪತಿ ಶ್ರೀ ಸುಭುಧೇಂದ್ರ ತೀರ್ಥ ಶ್ರೀಪಾದರ ಪರಿಪೂರ್ಣ ಆರ್ಶೀವಾದದಿಂದ ಶುಭಾರಂಭವಾದ 355ನೇ ಆರಾಧನಾ ಮಹೋತ್ಸವಕ್ಕೆ ತಂಬಿಹಳ್ಳಿಯ ಶ್ರೀಮನ್ ಮಾಧವ ತೀರ್ಥ ಮಠದ ಶ್ರೀ ವಿದ್ಯಾವಲ್ಲಭ ತೀರ್ಥ ಶ್ರೀಪಾದರು ಧನ, ಧಾನ್ಯ, ಗೋವಿನ ಪೂಜೆ ಸಲ್ಲಿಸಿ ವಿಧ್ಯುಕ್ತವಾಗಿ ಚಾಲನೆ ನೀಡಿದರು. ನೆರೆದ ನೂರಾರು ಭಕ್ತರ ಸಮ್ಮುಖದಲ್ಲಿ ನವೀಕೃತ ತ್ಯಾಗರಾಜರ ನಗರ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಮೂರು ದಿನಗಳ ಕಾಲ ಅದ್ದೂರಿಯಾಗಿ ಆರಾಧನಾ ಮಹೋತ್ಸವ ನಡೆಯಲಿದೆ. ವಿಧಾನ ಸಭೆ ಪ್ರತಿ ಪಕ್ಷ ನಾಯಕ ಆರ್ ಅಶೋಕ್, ಲೋಕಸಭಾ ಸದಸ್ಯರಾದ ಡಾ. ಸಿ ಮಂಜುನಾಥ್, ತೇಜಸ್ವಿ ಸೂರ್ಯ, ಶಾಸಕ ರವಿ ಸುಬ್ರಮಣ್ಯ, ಟಿ ಎ ಶರವಣ, ಬಿಜೆಪಿ ಮುಖಂಡ ಸಂಗಾತಿ ವೆಂಕಟೇಶ್, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಉಪಾಧ್ಯಕ್ಷ ದಿಲೀಪ್ ಕುಮಾರ್, ವಿಶ್ವ ಮಧ್ವಮತ ವೆಲ್ಫೇರ್ ಅಸೋಸಿಯೇಷನ್ ಅಧ್ಯಕ್ಷ ವೆಂಕೋಬ ರಾವ್ ಸೇರಿದಂತೆ ಹಲವು ಗಣ್ಯರು ಆರಾಧನಾ ಮಹೋತ್ಸವಕ್ಕೆ ಆಗಮಿಸಿ ರಾಯರ ಕೃಪೆಗೆ ಪಾತ್ರರಾಗುತ್ತಾರೆ. ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಮಠದ ವಕ್ತಾರರು ತಿಳಿಸಿದ್ದಾರೆ.**

## ಸಂಪುಟ ವಿಸ್ತರಣೆ ಕಗ್ಗಂಟು; ದೆಹಲಿಯಲ್ಲಿ ಅಂತಿಮ ಕಸರತ್ತು

1ನೇ ಪುಟದಿಂದ

**ಸೋಮವಾರ ಮತ್ತೆ ದೆಹಲಿಗೆ ಡಿಕೆಶಿ**

ಈ ಎಲ್ಲ ಬೆಳವಣಿಗೆಗಳ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮೂರನೇ ಹಂತದ ಸಚಿವ ಸಂಪುಟ ವಿಸ್ತರಣೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಜತೆ ಅಂತಿಮ ಸುತ್ತಿನ ಚರ್ಚೆ ನಡೆಸಲು ಸೋಮವಾರ ಮತ್ತೆ ದೆಹಲಿಗೆ ತೆರಳಲಿದ್ದಾರೆ.

ನಾಗೇಂದ್ರ ರಾಜೀನಾಮೆ ಹಾಗೂ ಸಂಪುಟ ಪುನರ್‌ರಚನೆ ಕುರಿತು ಚರ್ಚಿಸಲು ಶಿವಕುಮಾರ್ ಅವರು ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಮಾತುಕತೆ ನಡೆಸಿದ್ದರು. ಈ ವೇಳೆ ಮೂರನೇ ಹಂತದ ಸಂಪುಟ ವಿಸ್ತರಣೆಯ ಕುರಿತು ಮತ್ತೊಮ್ಮೆ ಚರ್ಚಿಸಲು ಸೋಮವಾರ ದೆಹಲಿಗೆ ಬರುವಂತೆ ರಾಹುಲ್ ಗಾಂಧಿ ಸೂಚಿಸಿದ್ದರು ಎನ್ನಲಾಗಿದೆ.

ಅದರಂತೆ ಸೋಮವಾರ ನಡೆಯಲಿರುವ ಸಭೆಯಲ್ಲಿ ಖಾಲಿ ಇರುವ ಸ್ಥಾನಗಳಿಗೆ ಯಾರನ್ನು ಆಯ್ಕೆ ಮಾಡಬೇಕು, ಯಾರಿಗೆ ಸಚಿವ ಸ್ಥಾನ ನೀಡಬೇಕು ಹಾಗೂ ಸಂಪುಟದಲ್ಲಿ ಬದಲಾವಣೆ ಅಗತ್ಯವಿದೆಯೇ ಎಂಬ ಕುರಿತು ವರಿಷ್ಠರು ಚರ್ಚೆ ನಡೆಸುವ ಸಾಧ್ಯತೆ ಇದೆ.

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೂ ಸೋಮವಾರ ದೆಹಲಿಗೆ ಆಗಮಿಸುವಂತೆ ಹೈಕಮಾಂಡ್ ಸೂಚಿಸಿದೆ ಎನ್ನಲಾಗಿದೆ. ಹೀಗಾಗಿ ಸೋಮವಾರದ ಸಭೆಯಲ್ಲೇ ಮೂರನೇ ಹಂತದ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗುವ ಸಾಧ್ಯತೆ ಇದ್ದು, ಮುಂದಿನ ವಾರವೇ ಹೊಸ ಸಚಿವರ ಪ್ರಮಾಣವಚನ ನಡೆಯಬಹುದೆಂಬ ನಿರೀಕ್ಷೆ ಕಾಂಗ್ರೆಸ್ ವಲಯದಲ್ಲಿ ಮೂಡಿದೆ.

**ಆಕಾಂಕ್ಷಿಗಳ ದೆಹಲಿ ದೌಡು**

ಖಾಲಿ ಇರುವ ಎರಡು ಸ್ಥಾನಗಳಿಗೆ ಮಾತ್ರ ಪೈಪೋಟಿ ಇದ್ದರೂ, ಕೆಲ ಹಿರಿಯ ಶಾಸಕರು ಸಂಪುಟದಲ್ಲಿರುವ ಮೂರು-ನಾಲ್ಕು ಸಚಿವರನ್ನು ಕೈಬಿಟ್ಟು ತಮಗೆ ಅವಕಾಶ ನೀಡುವಂತೆ ಹೈಕಮಾಂಡ್‌ಗೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ಕಾಂಗ್ರೆಸ್‌ನ ಸುಮಾರು 8ರಿಂದ 10 ಮಂದಿ ಹಿರಿಯ ಶಾಸಕರು ಸಚಿವ ಸ್ಥಾನಕ್ಕಾಗಿ ವರಿಷ್ಠರ ಮೇಲೆ ಒತ್ತಡ ಹೇರುತ್ತಿದ್ದು, ಇಂದು ಹಾಗೂ ನಾಳೆಯೂ ಮತ್ತಷ್ಟು ಶಾಸಕರು ದೆಹಲಿಗೆ ತೆರಳಿ ತಮ್ಮ ಹಕ್ಕು ಮಂಡಿಸುವ ಸಾಧ್ಯತೆ ಇದೆ.

ಹೀಗಾಗಿ ಮೂರನೇ ಹಂತದ ಸಂಪುಟ ವಿಸ್ತರಣೆ ಕಾಂಗ್ರೆಸ್ ಸರ್ಕಾರಕ್ಕೆ ಕೇವಲ ಖಾಲಿ ಸ್ಥಾನ ಭರ್ತಿ ಮಾಡುವ ಪ್ರಕ್ರಿಯೆಯಾಗದೆ, ಸಮುದಾಯ, ಹಿರಿಯತ್ವ, ಮಹಿಳಾ ಪ್ರಾತಿನಿಧ್ಯ, ಪ್ರಾದೇಶಿಕ ಸಮತೋಲನ ಹಾಗೂ ಪಕ್ಷದೊಳಗಿನ ಅಸಮಾಧಾನವನ್ನು ನಿರ್ವಹಿಸುವ ರಾಜಕೀಯ ಸವಾಲಾಗಿ ಪರಿಣಮಿಸಿದೆ. ಸೋಮವಾರ ದೆಹಲಿಯಲ್ಲಿ ನಡೆಯಲಿರುವ ಹೈಕಮಾಂಡ್ ಸಭೆಯ ಬಳಿಕ ಈ ಕುತೂಹಲಕ್ಕೆ ತೆರೆ ಬೀಳುವ ನಿರೀಕ್ಷೆಯಿದೆ.

# ಪ್ರತಿಭಾವಂತ ವಿದ್ಯಾರ್ಥಿಗಳೇ ಬೆಂಗಳೂರಿನ ಹೆಮ್ಮೆ, ಭವಿಷ್ಯ: ಕೃಷ್ಣ ಬೈರೇಗೌಡ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರತಿಭಾವಂತ ವಿದ್ಯಾರ್ಥಿಗಳು ಮತ್ತು ಯುವಕರೇ ಬೆಂಗಳೂರಿನ ಹೆಮ್ಮೆ ಹಾಗೂ ರಾಜ್ಯದ ಭವಿಷ್ಯ. ಅವರ ಸಾಧನೆಯನ್ನು ಇಡೀ ಬೆಂಗಳೂರಿನ ಜನತೆಯ ಪರವಾಗಿ ಸಂಭ್ರಮಿಸುವುದು ನಮ್ಮ ಕರ್ತವ್ಯ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಬೆಂಗಳೂರು ಜಿಲ್ಲಾ ಪಂಚಾಯಿತಿ ವತಿಯಿಂದ ಶನಿವಾರ ಪುರಭವನದಲ್ಲಿ ಆಯೋಜಿಸಿದ್ದ 'ನಮ್ಮೂರು ಹೆಮ್ಮೆ' ಪೌರ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಾಲೆ ಮತ್ತು ಪದವಿ ಪೂರ್ವ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ 181 ಪ್ರತಿಭಾವಂತ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಗೌರವಿಸಲಾಯಿತು.

"99ಕ್ಕೂ ಹೆಚ್ಚು ಅಂಕ ಗಳಿಸುವುದು ಸುಲಭದ ಸಾಧನೆಯಲ್ಲ. ಅದರ ಹಿಂದೆ ವಿದ್ಯಾರ್ಥಿಯ ಕಠಿಣ ಪರಿಶ್ರಮ, ಶ್ರದ್ಧೆ ಮತ್ತು ಗುರಿ ಇರುತ್ತದೆ. ಇಂತಹ ಪ್ರತಿಭೆಯನ್ನು ಗುರುತಿಸಿ ಸಂಭ್ರಮಿಸುವುದು ನಮ್ಮೆಲ್ಲರ ಕರ್ತವ್ಯ. ನಾವು ಸಾಧಿಸದಿದ್ದರೂ ಅವರ ಸಾಧನೆಯನ್ನು ನಮ್ಮ ಸಾಧನೆಯಂತೆ ಸಂಭ್ರಮಿಸುವುದು ಹೆಮ್ಮೆಯ ವಿಷಯ" ಎಂದು ಸಚಿವರು ಹೇಳಿದರು.

ಸಾಧನೆಗೆ ಸೌಲಭ್ಯಗಳ ಕೊರತೆ ಎಂದಿಗೂ ಅಡ್ಡಿಯಾಗಬಾರದು. ತಮ್ಮ ಗ್ರಾಮೀಣ ಕ್ಷೇತ್ರದಲ್ಲಿ ಕಟ್ಟಡ, ಸೂಕ್ತ ಕೊಠಡಿ ಹಾಗೂ ಅಗತ್ಯ ಮೂಲಸೌಕರ್ಯಗಳ ಕೊರತೆಯ ನಡುವೆಯೂ ಕೇವಲ ಒಬ್ಬ ಶಿಕ್ಷಕರಿದ್ದ ಶಾಲೆಯೊಂದು ಶೇ.100 ಫಲಿತಾಂಶ ದಾಖಲಿಸಿದ್ದ ಉದಾಹರಣೆಯನ್ನು ಸಚಿವರು ಹಂಚಿಕೊಂಡರು. ಮತ್ತೊಂದೆಡೆ ಎಲ್ಲ ಮೂಲಸೌಕರ್ಯಗಳಿದ್ದ ಶಾಲೆಯಲ್ಲಿ ಶೇ.35ರಿಂದ 40ರಷ್ಟು ಮಾತ್ರ ಫಲಿತಾಂಶ ಬಂದಿತ್ತು. ಹೀಗಾಗಿ ಇರುವ ಸೌಲಭ್ಯಗಳ ಬಗ್ಗೆ ಕೊರಗುವ ಬದಲು ಅವುಗಳನ್ನು ಸಮರ್ಥವಾಗಿ



ಬಳಸಿಕೊಂಡು ಸಾಧನೆ ಮಾಡಬೇಕು ಎಂದರು.

ತಮ್ಮ ಕ್ಷೇತ್ರದಲ್ಲಿ ಪ್ರತಿವರ್ಷ ನೂರಾರು ವಿದ್ಯಾರ್ಥಿಗಳನ್ನು ಸನ್ಮಾನಿಸಿರುವುದಾಗಿ ತಿಳಿಸಿದ ಅವರು, ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳು ಸಹ ಅತ್ಯುತ್ತಮ ಸಾಧನೆ ಮಾಡುತ್ತಿರುವುದನ್ನು ಕಂಡಿದ್ದೇನೆ. ಅಪಾರ್ಟ್‌ಮೆಂಟ್‌ಗಳಲ್ಲಿ ಕೆಲಸ ಮಾಡುವವರ ಮಕ್ಕಳು ಹೆಚ್ಚಿನ ಅಂಕ ಗಳಿಸಿರುವ ಹಾಗೂ ಪಾನಿಪುರಿ ಅಂಗಡಿ ನಡೆಸುವವರ ಮಗ 625ಕ್ಕೆ 625 ಅಂಕ ಗಳಿಸಿರುವ ಉದಾಹರಣೆಗಳಿವೆ. ಶಾಲೆ ಅಥವಾ ಸೌಲಭ್ಯಗಳಿಗಿಂತ ಪರಿಶ್ರಮವೇ ಯಶಸ್ಸಿನ ಪ್ರಮುಖ ಕೀಲಿಕೈ ಎಂದು ಹೇಳಿದರು.

ಪ್ರತಿಭೆ ಎಂದರೆ ಕೇವಲ ಅಂಕಗಳು ಅಥವಾ ಶೈಕ್ಷಣಿಕ ಸಾಧನೆ ಮಾತ್ರವಲ್ಲ. ಕ್ರೀಡೆ, ಕಲೆ, ವಿಜ್ಞಾನ, ತಂತ್ರಜ್ಞಾನ, ಸಾಹಿತ್ಯ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿನ ಪ್ರತಿಭೆ ಮತ್ತು ಕೌಶಲ್ಯಕ್ಕೂ ಸಮಾನ ಗೌರವ ಸಿಗಬೇಕು. ಯುವಕರು ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡು ಶ್ರದ್ಧೆ, ಪ್ರಾಮಾಣಿಕತೆ ಹಾಗೂ ಬದ್ಧತೆಯಿಂದ ಮುನ್ನಡೆಯಬೇಕು ಎಂದು ಕೃಷ್ಣ ಬೈರೇಗೌಡ ಕರೆ ನೀಡಿದರು. ಐತಿಹಾಸಿಕ ಪುರಭವನದಲ್ಲಿ ಪೌರ ಸನ್ಮಾನ ಆಯೋಜಿಸಿರುವುದು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಇತರರಿಗೂ ಸ್ಫೂರ್ತಿ ನೀಡಲಿದೆ ಎಂಬ ಉದ್ದೇಶದಿಂದ ಎಂದು ಅವರು ಹೇಳಿದರು.




'ನಮ್ಮೂರು ಹೆಮ್ಮೆ' ಕಾರ್ಯಕ್ರಮದಲ್ಲಿ 106 ಎಸ್ಸೆಸ್ಸೆಲ್ಸಿ, 45 ಪಿಯುಸಿ ಹಾಗೂ ಜಿಬಿಎ ಶಾಲೆಗಳ 30 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 181 ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ, ಪದಕ, ನೆನಪಿನ ಕಾಣಿಕೆ, ಸ್ಮಾರ್ಟ್‌ವಾಚ್, ಬ್ಯಾಗ್, ಶಾಲು ಹಾಗೂ ಕುಡಿಯುವ ನೀರಿನ ಬಾಟಲಿ ನೀಡಿ ಸನ್ಮಾನಿಸಲಾಯಿತು.

ಎಸ್ಸೆಸ್ಸೆಲ್ಸಿಯ ಐವರು ಹಾಗೂ ಪಿಯುಸಿಯ ಮೂವರು ಅಗ್ರ ಸಾಧಕರಿಗೆ ಹೆಚ್ಚುವರಿಯಾಗಿ ಟ್ಯಾಬ್ಲೆಟ್‌ಗಳನ್ನು ಉಡುಗೊರೆಯಾಗಿ ನೀಡಲಾಯಿತು.

# ಆರ್‌ಎಸ್‌ಎಸ್ ಹೇಳಿಕೆ: ಸಿದ್ದರಾಮಯ್ಯಗೆ ರಿಲೀಫ್

● ವಿಕ್ರಮ ವಾಹಿನಿ । ಬೆಂಗಳೂರು

ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಹಾಗೂ ಬಜರಂಗದಳದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸಲ್ಲಿಸಲಾಗಿದ್ದ ಮರುಪರಿಶೀಲನಾ ಅರ್ಜಿಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಈ ಮೂಲಕ ಬೆಂಗಳೂರಿನ 42ನೇ ಎಸಿಜೆಎಂ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿದೆ.



ಆರ್‌ಎಸ್‌ಎಸ್ ಮತ್ತು ಬಜರಂಗದಳದಿಂದಲೇ ಹೆಚ್ಚಿನ ಅಪರಾಧ ಕೃತ್ಯಗಳು ನಡೆಯುತ್ತಿವೆ ಎಂದು ವಿಧಾನಸಭೆಯಲ್ಲಿ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಇದರಿಂದ ಜನರ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ಆರೋಪಿಸಿ ಕಿರಣ್ ಎಂಬುವರು ಖಾಸಗಿ ದೂರು ಸಲ್ಲಿಸಿದ್ದರು.

ಪ್ರಕರಣ ದಾಖಲಿಸುವ ಮುನ್ನ ಸಿದ್ದರಾಮಯ್ಯ ಅವರ ವಾದ ಆಲಿಸಿದ್ದ 42ನೇ ಎಸಿಜೆಎಂ ನ್ಯಾಯಾಲಯ, ಖಾಸಗಿ ದೂರನ್ನು ವಜಾಗೊಳಿಸಿತ್ತು. ಇದನ್ನು ಪ್ರಶ್ನಿಸಿ ಕಿರಣ್ ಅವರು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಮರುಪರಿಶೀಲನಾ ಅರ್ಜಿ ಸಲ್ಲಿಸಿದ್ದರು.

ವಿಚಾರಣೆ ವೇಳೆ ಸಿದ್ದರಾಮಯ್ಯ ಪರ ಹಿರಿಯ ವಕೀಲ ವಿಕ್ರಮ್ ಹುಯಿಲಗೋಳ್ ವಾದ ಮಂಡಿಸಿ, ವಿಧಾನಸಭೆಯಲ್ಲಿ ನೀಡಿದ ಹೇಳಿಕೆಗೆ ಸಂವಿಧಾನದ 194(2)ನೇ ವಿಧಿಯಡಿ ರಕ್ಷಣೆ ಇದೆ ಎಂದು ತಿಳಿಸಿದರು. ವಾದ ಆಲಿಸಿದ ನ್ಯಾಯಾಲಯವು ಮರುಪರಿಶೀಲನಾ ಅರ್ಜಿಯನ್ನು ವಜಾಗೊಳಿಸಿ, ಕೆಳ ನ್ಯಾಯಾಲಯದ ಆದೇಶವನ್ನು ಸಮರ್ಥಿಸಿದೆ.

# ಪಂಚಾಯತಿ ವ್ಯಾಪ್ತಿ ಕೆರೆಗಳ ಒತ್ತುವರಿ ತೆರವಿಗೆ ಈಶ್ವರ ಖಂಡ್ರೆ ಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ಕೆರೆಗಳು ಗ್ರಾಮೀಣ ಪ್ರದೇಶದ ಜನರ ಜೀವನಾಡಿಯಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕೆರೆಗಳ ಒತ್ತುವರಿ ತೆರವಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಮುಂದಾಗಿದ್ದಾರೆ.



ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿರುವ ಮತ್ತು ಇಲಾಖೆಯ ನಿರ್ವಹಣೆಯಲ್ಲಿರುವ ಕೆರೆಗಳ ಸಂಖ್ಯೆ ಮತ್ತು ಯಾವ ಯಾವ ಕೆರೆಗಳ ಎಷ್ಟು ಪ್ರದೇಶ ಒತ್ತುವರಿಯಾಗಿದೆ,

ಮುಂದಿನ 30 ವರ್ಷಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಳವಾಗುವ ಜನಸಂಖ್ಯೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಮೇಲ್ಮೈ ನೀರಿನಿಂದ ಶುದ್ಧ ಕುಡಿಯುವ ನೀರು ಪೂರೈಕೆಗೆ ಸರ್ಕಾರ ಯೋಜನೆ ರೂಪಿಸಿದ್ದು, ಈ ನಿಟ್ಟಿನಲ್ಲಿ ಪ್ರಮುಖ ಸಿಹಿ ನೀರಿನ ಮೂಲಗಳಾದ ಕೆರೆ, ಸರೋವರಗಳ ಸಂರಕ್ಷಣೆ ಅತ್ಯಗತ್ಯ ಮತ್ತು ಅನಿವಾರ್ಯವಾಗಿದೆ ಎಂದು ಪತ್ರದಲ್ಲಿ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ನಾಗರಿಕತೆಯ ವಿಕಾಸದಲ್ಲಿ ಕೆರೆಗಳು ಮಹತ್ವದ ಪಾತ್ರ ವಹಿಸುತ್ತಿದ್ದು, ಭೂಮಿಯ ಮೇಲಿರುವ ಸಿಹಿ ನೀರಿನ ಮೂಲವಾದ ಕೆರೆ ಮತ್ತು ಸರೋವರಗಳ ರಕ್ಷಣೆ, ಸುಸ್ಥಿರ ನಿರ್ವಹಣೆ ಹಾಗೂ ಪರಿಸರ ವ್ಯವಸ್ಥೆಯಲ್ಲಿ ಅವುಗಳ ಪಾತ್ರದ ಕುರಿತು ಜಾಗತಿಕವಾಗಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಆಗಸ್ಟ್ 27 ರಂದು ಆಚರಿಸಲಾಗುವ ವಿಶ್ವ ಕೆರೆ ದಿನದಂದು ಸಚಿವರು ಈ ಸೂಚನೆ ನೀಡಿದ್ದಾರೆ.

# ಕೆಪಿಎಸ್‌ಸಿ ಅಕ್ರಮ: ಜ್ಞಾನೇಂದ್ರ ಕುಮಾರ್ ವಶಕ್ಕೆ

1ನೇ ಪುಟದಿಂದ

ಶುಕ್ರವಾರ ಮಧ್ಯಾಹ್ನ 12 ಗಂಟೆಯಿಂದ ಮತ್ತೆ ವಿಚಾರಣೆ ಮುಂದುವರಿಸಲಾಯಿತು. ವಿಚಾರಣೆ ವೇಳೆ ಅವರು ನೀಡಿದ ಹೇಳಿಕೆಗಳಲ್ಲಿ ಅಸಮಂಜಸತೆ ಕಂಡುಬಂದಿದ್ದು, ತನಿಖೆಗೆ ಅಗತ್ಯ ಮಾಹಿತಿಯನ್ನು ಸಮರ್ಪಕವಾಗಿ ನೀಡದ ಹಿನ್ನೆಲೆಯಲ್ಲಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿದುಬಂದಿದೆ.

ಪಶು ವೈದ್ಯಾಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದ ಪರೀಕ್ಷೆಯ ಸಂದರ್ಭದಲ್ಲಿ ಪರೀಕ್ಷಾ ನಿಯಂತ್ರಕರಾಗಿ ಜ್ಞಾನೇಂದ್ರ ಕುಮಾರ್ ನಿರ್ವಹಿಸಿದ್ದ ಜವಾಬ್ದಾರಿ, ಪ್ರಶ್ನೆಪತ್ರಿಕೆ ಸಿದ್ಧತೆ ಮತ್ತು ಸಂರಕ್ಷಣೆ, ಪರೀಕ್ಷಾ ಪ್ರಕ್ರಿಯೆ, ಮೌಲ್ಯಮಾಪನ ಹಾಗೂ ಅಂಕಗಳ ದಾಖಲಾತಿ ಸೇರಿದಂತೆ ಹಲವು ಅಂಶಗಳ ಕುರಿತು ಅಧಿಕಾರಿಗಳು ಮಾಹಿತಿ ಕಲೆಹಾಕುತ್ತಿದ್ದಾರೆ.

ಜ್ಞಾನೇಂದ್ರ ಕುಮಾರ್ ಅವರನ್ನು ವಶಕ್ಕೆ ಪಡೆದ ಬಳಿಕ ವೈದ್ಯಕೀಯ ತಪಾಸಣೆಗೆ ಒಳಪಡಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸುವ ಪ್ರಕ್ರಿಯೆ ನಡೆಯಲಿದೆ. ಪ್ರಕರಣದ ಕುರಿತು ಹೆಚ್ಚಿನ ಮಾಹಿತಿ ಪಡೆಯಲು ಹಾಗೂ ಅಕ್ರಮದಲ್ಲಿ ಇತರರ ಪಾತ್ರವನ್ನು ಪತ್ತೆಹಚ್ಚಲು ಅವರನ್ನು ಹೆಚ್ಚಿನ ದಿನಗಳ ಕಾಲ ಸಿಐಡಿ ಕಸ್ಟಡಿಗೆ ಪಡೆಯುವ ಸಾಧ್ಯತೆ ಇದೆ.

ಪ್ರಕರಣದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಅಥವಾ ಅಂಕಗಳ ತಿದ್ದುಪಡಿ ನಡೆದಿದ್ದರೆ ಅದರ ಹಿಂದೆ ಯಾರಿದ್ದಾರೆ, ನೇಮಕಾತಿ ಪ್ರಕ್ರಿಯೆಯಲ್ಲಿ ಯಾರಿಗೆ ಲಾಭವಾಗಿದೆ ಮತ್ತು ಅಧಿಕಾರಿಗಳ ಪಾತ್ರವೇನು ಎಂಬುದರ ಕುರಿತು ತನಿಖಾಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಕೆಪಿಎಸ್‌ಸಿ ನೇಮಕಾತಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವೂ (ಇಡಿ) ತನಿಖೆ ನಡೆಸುತ್ತಿದೆ. ಇತ್ತೀಚೆಗೆ ಜ್ಞಾನೇಂದ್ರ ಕುಮಾರ್ ಅವರ ನಿವಾಸದ ಮೇಲೂ ಇಡಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದರು.

ದಾಳಿ ಸಂದರ್ಭದಲ್ಲಿ ಜ್ಞಾನೇಂದ್ರ ಕುಮಾರ್ ಮನೆಯಲ್ಲಿ ಇರಲಿಲ್ಲ. ಅವರು ಉತ್ತರ ಪ್ರದೇಶಕ್ಕೆ ತೆರಳಿದ್ದ ಹಿನ್ನೆಲೆಯಲ್ಲಿ, ಅಧಿಕಾರಿಗಳು ನಕಲಿ ಕೀ ಮಾಡಿಸಿ ಮನೆ ಪ್ರವೇಶಿಸಿ ದಾಖಲೆಗಳು ಹಾಗೂ ಇತರ ವಸ್ತುಗಳನ್ನು ಪರಿಶೀಲಿಸಿದ್ದರು ಎನ್ನಲಾಗಿದೆ.

ಪ್ರಕರಣದ ತನಿಖೆಯ ಭಾಗವಾಗಿ ಸಿಐಡಿ ಅಧಿಕಾರಿಗಳು ಕೆಪಿಎಸ್‌ಸಿ ಕಚೇರಿಯಲ್ಲೂ ಪರಿಶೀಲನೆ ನಡೆಸಿ, ಪರೀಕ್ಷೆ ಮತ್ತು ನೇಮಕಾತಿಗೆ ಸಂಬಂಧಿಸಿದ ದಾಖಲೆಗಳನ್ನು ವಶಕ್ಕೆ ಪಡೆದು ಪರಿಶೀಲಿಸುತ್ತಿದ್ದಾರೆ. ಮಾಜಿ ಕೆಪಿಎಸ್‌ಸಿ ಅಧ್ಯಕ್ಷರು, ಸದಸ್ಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಪಾತ್ರದ ಬಗ್ಗೆಯೂ ತನಿಖೆ ನಡೆಯುತ್ತಿದೆ. ಜ್ಞಾನೇಂದ್ರ ಕುಮಾರ್ ಅವರ ವಿಚಾರಣೆ ಹಾಗೂ ಮುಂದಿನ ತನಿಖೆಯಿಂದ ನೇಮಕಾತಿ ಅಕ್ರಮದ ಹಿಂದೆ ನಡೆದಿರುವ ಸಂಪೂರ್ಣ ಜಾಲದ ಕುರಿತು ಹೆಚ್ಚಿನ ಮಾಹಿತಿ ಹೊರಬರುವ ನಿರೀಕ್ಷೆಯಿದೆ.

# ಒಲಿಂಪಿಕ್ಸ್‌ನಲ್ಲಿ ಕನ್ನಡಿಗರು ಹೆಚ್ಚು ಪದಕ ಗೆಲ್ಲಬೇಕು: ಡಾ. ಕೆ. ಗೋವಿಂದರಾಜು

● ವಿಕ್ರಮ ವಾಹಿನಿ । ಬೆಂಗಳೂರು



ಮುಂಬರುವ ಒಲಿಂಪಿಕ್ ಕ್ರೀಡಾಕೂಟಗಳಲ್ಲಿ ಕರ್ನಾಟಕದ ಕ್ರೀಡಾಪಟುಗಳು ಕನಿಷ್ಠ 10 ಪದಕಗಳನ್ನು ಗೆಲ್ಲುವಂತಾಗಬೇಕು. ಈ ನಿಟ್ಟಿನಲ್ಲಿ ಕ್ರೀಡಾಪಟುಗಳಿಗೆ ಸರ್ಕಾರದಿಂದ ಅಗತ್ಯ ಪ್ರೋತ್ಸಾಹ ಮತ್ತು ನೆರವು ದೊರಕಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ಕರ್ನಾಟಕ ಒಲಿಂಪಿಕ್ ಸಂಸ್ಥೆ (ಕೆಒಎ) ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಕೆ. ಗೋವಿಂದರಾಜು ಹೇಳಿದರು.

ಕರ್ನಾಟಕ ಒಲಿಂಪಿಕ್ ಭವನದಲ್ಲಿ ಶನಿವಾರ ಆಯೋಜಿಸಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಒಲಿಂಪಿಕ್ಸ್‌ನಲ್ಲಿ ಕರ್ನಾಟಕದಿಂದ ಕನಿಷ್ಠ 15ರಿಂದ 20 ಕ್ರೀಡಾಪಟುಗಳು ಭಾಗವಹಿಸಬೇಕು. ಅವರ ಪೈಕಿ 10ರಿಂದ 15 ಮಂದಿ ಪದಕ ಗೆಲ್ಲಬೇಕು ಎಂಬುದು ನನ್ನ ಕನಸು" ಎಂದರು.

ಹಾಕಿ ದಂತಕಥೆ ಮೇಜರ್ ಧ್ಯಾನ್ ಚಂದ್ ಅವರ ಜನ್ಮದಿನದ ಸ್ಮರಣಾರ್ಥ ಆಗಸ್ಟ್ 29ರಂದು ರಾಷ್ಟ್ರೀಯ ಕ್ರೀಡಾ ದಿನ ಆಚರಿಸಲಾಗುತ್ತಿದೆ. ಯುವಜನರಲ್ಲಿ ಕ್ರೀಡಾಸಕ್ತಿ ಮತ್ತು ಕ್ರೀಡಾ ಮನೋಭಾವ ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಅವರು ಹೇಳಿದರು.

ಧ್ಯಾನ್ ಚಂದ್‌ಗೆ ಗೌರವ

ಕಾರ್ಯಕ್ರಮದ ಅಂಗವಾಗಿ ಮೇಜರ್ ಧ್ಯಾನ್ ಚಂದ್ ಅವರ ಪ್ರತಿಮೆ ಹಾಗೂ ಭಾವಚಿತ್ರಕ್ಕೆ ಡಾ. ಕೆ. ಗೋವಿಂದರಾಜು ಮತ್ತು ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಎಂ.ಎನ್. ಅನುಚೇತ್ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.

ಕೆಒಎ ಕಾರ್ಯದರ್ಶಿ ಅನಂತರಾಜು, ಮಾಜಿ ಅಂತಾರಾಷ್ಟ್ರೀಯ ಹಾಕಿ ಆಟಗಾರರಾದ ಸುನೀಲ್, ಅರ್ಜುನ್ ಹಾಲಪ್ಪ, ನಿಕ್ಕಿನ್ ಉತ್ತಪ್ಪ, ಮಾಜಿ ಕ್ರೀಡಾಪಟುಗಳಾದ ಉದಯ್ ಪ್ರಭು, ಜಿ. ದಿಲೀಪ್ ಸೇರಿದಂತೆ ಕೆಒಎ ಪದಾಧಿಕಾರಿಗಳು ಹಾಗೂ ಕ್ರೀಡಾ ಕ್ಷೇತ್ರದ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಶುದ್ಧ ನೀರು: ಸದ್ಗುರು

● ವಿಕ್ರಮ ವಾಹಿನಿ । ತುಮಕೂರು

ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸಿ, ಪ್ರತಿ ಕುಟುಂಬಕ್ಕೂ ಪ್ರತಿದಿನ 20 ಲೀಟರ್ ಶುದ್ಧ ಕುಡಿಯುವ ನೀರು ಒದಗಿಸುವ ಯೋಜನೆ ರೂಪಿಸಲು ಚಿಂತಿಸಲಾಗುತ್ತಿದೆ ಎಂದು ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ತಿಳಿಸಿದರು.

ತುಮಕೂರಿನಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಹಲವು ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಗುಣಮಟ್ಟದ ಸಮಸ್ಯೆ, ಅದರಲ್ಲೂ ಫ್ಲೋರೈಡ್ ಅಂಶ ಹೆಚ್ಚಿರುವುದು ಗಂಭೀರ ವಿಚಾರವಾಗಿದೆ. ಇಂತಹ ಪ್ರದೇಶಗಳನ್ನು ಗುರುತಿಸಿ ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸುವ ಮೂಲಕ ಸ್ಥಳೀಯರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಫಲಾನುಭವಿ ಕುಟುಂಬಗಳಿಗೆ ವಿಶೇಷ ಕಾರ್ಡ್‌ಗಳನ್ನು ನೀಡಲಾಗುವುದು. ಈ ಕಾರ್ಡ್ ಮೂಲಕ ಪ್ರತಿದಿನ 20 ಲೀಟರ್ ಶುದ್ಧ ಕುಡಿಯುವ ನೀರು ಪಡೆಯುವ ವ್ಯವಸ್ಥೆ ಕಲ್ಪಿಸುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಅಗತ್ಯವಿರುವ ಗ್ರಾಮಗಳಲ್ಲಿ ಹಂತ ಹಂತವಾಗಿ



ಯೋಜನೆ ಜಾರಿಗೆ ತರಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಶ್ರೀ ಸತ್ಯಸಾಯಿ ಬಾಬಾ ಅವರು ಆಂಧ್ರಪ್ರದೇಶದ ರಾಯಲಸೀಮೆ ಹಾಗೂ ಅನಂತಪುರ ಸೇರಿದಂತೆ ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಬೃಹತ್ ನೀರು ಯೋಜನೆಗಳನ್ನು ಕೈಗೊಂಡಿದ್ದರು.

ಅದೇ ಮಾದರಿಯಲ್ಲಿ ಕರ್ನಾಟಕದಲ್ಲೂ ಅಗತ್ಯವಿರುವ ಗ್ರಾಮಗಳನ್ನು ಗುರುತಿಸಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಂಸ್ಥೆ ಮುಂದಾಗಲಿದೆ ಎಂದು ಸದ್ಗುರು ಮಧುಸೂದನ ಸಾಯಿ ಹೇಳಿದರು.

"ನೀರಾವರಿಗಿಂತಲೂ ಮೊದಲು ಜನರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವುದು ಮುಖ್ಯ. ಪ್ರತಿಯೊಬ್ಬರಿಗೂ ಶುದ್ಧ ನೀರು ದೊರೆಯುವಂತಾಗಬೇಕು ಎಂಬುದು ನಮ್ಮ ಉದ್ದೇಶ" ಎಂದರು.

ನೇಪಾಳದಲ್ಲಿ ಸಂಭವಿಸಿರುವ ಭೀಕರ ದುರಂತಕ್ಕೆ ಸಂತಾಪ ವ್ಯಕ್ತಪಡಿಸಿದ ಅವರು, ಸಂತ್ರಸ್ತರಿಗೆ ನೆರವು ನೀಡಲು ಸಂಸ್ಥೆ ಸಿದ್ಧವಿದೆ ಎಂದು ತಿಳಿಸಿದರು. ನೇಪಾಳದಲ್ಲಿರುವ ಸಂಸ್ಥೆಯ ತಂಡಕ್ಕೆ ಈಗಾಗಲೇ ಅಗತ್ಯ ನೆರವು ನೀಡುವಂತೆ ಸೂಚಿಸಲಾಗಿದೆ. ಆದರೆ ದುರಂತ ಪೀಡಿತ ಪ್ರದೇಶಗಳಿಗೆ ಸದ್ಯ ಪ್ರವೇಶಿಸಲು ಸಾಧ್ಯವಾಗದ ಪರಿಸ್ಥಿತಿ ಇರುವುದರಿಂದ, ಪರಿಸ್ಥಿತಿ ಸುಧಾರಿಸಿದ ಬಳಿಕ ಮನೆ ಹಾಗೂ ಕುಟುಂಬ ಸದಸ್ಯರನ್ನು ಕಳೆದುಕೊಂಡವರಿಗೆ ನೆರವು ನೀಡಲು ತಂಡವನ್ನು ಕಳುಹಿಸಲಾಗುವುದು ಎಂದರು.

ನೇಪಾಳದ ದುರಂತವು ಹವಾಮಾನ ಬದಲಾವಣೆಯ ಗಂಭೀರ ಪರಿಣಾಮಗಳ ಕುರಿತು ಜಗತ್ತಿಗೆ ಮತ್ತೊಮ್ಮೆ ಎಚ್ಚರಿಕೆ ನೀಡಿದೆ. ಹಿಮಾಲಯ ಪ್ರದೇಶದಲ್ಲಿ ಹಿಮ ಕರಗುವಿಕೆ ಸೇರಿದಂತೆ ಪರಿಸರದಲ್ಲಾಗುತ್ತಿರುವ ಬದಲಾವಣೆಗಳು ಮುಂದಿನ ದಿನಗಳಲ್ಲಿ ಇಂತಹ ಅನಾಹುತಗಳಿಗೆ ಕಾರಣವಾಗುವ ಸಾಧ್ಯತೆ ಇದೆ. ಹೀಗಾಗಿ ಪರಿಸರ ಸಂರಕ್ಷಣೆ ಹಾಗೂ ಭವಿಷ್ಯದ ನೈಸರ್ಗಿಕ ದುರಂತಗಳನ್ನು ಎದುರಿಸಲು ಮುನ್ನೆಚ್ಚರಿಕೆ ಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.




**ಶನಿವಾರ ಕೆ.ವಿ. ರಾಮ್ ಪ್ರಸಾದ್, ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ಇವರು ಕರ್ನಾಟಕ ಆರ್ಯವೈಶ್ಯ ಮಹಾಸಭಾ(ರಿ) ಕೋಲಾರ ಜಿಲ್ಲಾ ಸಮಿತಿ ಹಮ್ಮಿಕೊಂಡಿದ್ದ ಕೋಲಾರ ಜಿಲ್ಲಾ ಸಮಾವೇಶ-2026 ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಗಳಾಗಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆ ಮಾಡಿ ಬಾಗವಹಿಸಿ ಇಲಾಖೆ ವ್ಯಾಪ್ತಿಯ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ 4 ಯೋಜನೆಗಳಿಗೆ 2026-27ನೇ ಸಾಲಿಗೆ ಅರ್ಜಿ ಆಹ್ವಾನಿಸುವ ಕರಪತ್ರಗಳನ್ನು ರವಿಶಂಕರ್, ಅಧ್ಯಕ್ಷರು ಕರ್ನಾಟಕ ಆರ್ಯವೈಶ್ಯ ಮಹಾಸಭಾ ಮತ್ತು ಸುದೀಂದ್ರರವರು, ಅಧ್ಯಕ್ಷರು, ಜೈವಿಕ ಇಂಧನ ಅಭಿವೃದ್ಧಿ ನಿಗಮ, ಇವರೊಂದಿಗೆ ಬಿಡುಗಡೆ ಮಾಡಿ ಸಮುದಾಯದ ಮಹಾಜನತೆಗೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರೆಕೊಟ್ಟು ಪ್ರಚಾರಪಡಿಸಲಾಯಿತು. ಈ ಸಂದರ್ಭದಲ್ಲಿ ಎ.ಆರ್.ರವಿಕುಮಾರ್ ರವರು,ಸಂಘಟನಾ ಕಾರ್ಯದರ್ಶಿ ಹಾಗೂ ಅಧ್ಯಕ್ಷರು ಅಮರ ಜ್ಯೋತಿ ಯೋಜನೆ, ಕೃಷ್ಣ ಪ್ರಧಾನ ಕಾರ್ಯದರ್ಶಿ, ನಟರಾಜ್, ಪ್ರಸನ್ನ, ಅಮರ್, ಕೆ.ಆರ್. ಶಿವಕುಮಾರ್ ಜಿಲ್ಲಾಧ್ಯಕ್ಷರು, ಎನ್ ಎಸ್ ಸತೀಶರವರು ಉಪಾಧ್ಯಕ್ಷರು ಹಾಗೂ ಮಹಾಸಭಾದ ನಿರ್ದೇಶಕರು ಬಾಗವಹಿಸಿದ್ದರು**

# ಗೃಹಲಕ್ಷ್ಮಿಗೆ ಮೂರು ವರ್ಷದ ಸಂಭ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹ ಲಕ್ಷ್ಮಿಗೆ ಮೂರು ವರ್ಷಗಳ ಸಂಭ್ರಮ. ಈ ಸಂಭ್ರಮದ ಸವಿನೆನಪಿಗಾಗಿ ಬೆಂಗಳೂರಿನ ವಿಧಾನಸೌಧ, ಬೆಳಗಾವಿಯ ಸುವರ್ಣಸೌಧ, ಮೈಸೂರು ಅರಮನೆ,ಚಿತ್ರದುರ್ಗದ ಕಲ್ಲಿನಕೋಟೆ, ಹಂಪಿಯ ಕಲ್ಲಿನರಥ, ಮಂಗಳೂರಿನಲ್ಲಿರುವ ದಕ್ಷಿಣಕನ್ನಡ ಜಿಲ್ಲಾಧಿಕಾರಿ ಕಚೇರಿ ಕಟ್ಟಡ, ಬೆಳಗಾವಿ ಕಿತ್ತೂರು ಚೆನ್ನಮ್ಮ ವೃತ್ತಗಳು ಭಾನುವಾರ(ಆ.30) ಸಂಜೆ 6ರಿಂದ ರಾತ್ರಿ 10ರವರೆಗೆ ಗುಲಾಬಿ ಬಣ್ಣ(ಪಿಂಕ್ ಲೈಟ್)ದ ಬೆಳಕಿನಲ್ಲಿ ಕಂಗೊಳಿಸಲಿವೆ.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಪ್ರತಿ ಮನೆಯ ಯಜಮಾನಿಗೆ ಪ್ರತಿ ತಿಂಗಳು ರೂ 2,000/- ನೀಡುವ ಮೂಲಕ ಮಹಿಳೆಯರು ಸ್ವಾವಲಂಬಿಜೀವನ ರೂಪಿಸಿಕೊಳ್ಳಲು ನೆರವಾಗಿರುವ ಗೃಹಲಕ್ಷ್ಮೀ ಯೋಜನೆ ಜಾರಿಗೆ ಬಂದು ಇದೇ ಆ.30ಕ್ಕೆ ಮೂರು ವರ್ಷಗಳನ್ನು ಪೂರೈಸಲಿದೆ.

ಸರ್ಕಾರವು ಗೃಹಲಕ್ಷ್ಮೀ ಯೋಜನೆ ಮೂರು ವರ್ಷಗಳನ್ನು ಪೂರೈಸುತ್ತಿರುವ ಈ ಸುಸಂದರ್ಭದಲ್ಲಿ ಮಹಿಳೆಯರ ಹೆಮ್ಮೆಯ ಸಂಕೇತವೆಂದು ಗುರುತಿಸಿರುವ ಗುಲಾಬಿ(ಪಿಂಕ್) ಬಣ್ಣದ ಬೆಳಕಿನ ವ್ಯವಸ್ಥೆಯನ್ನು ಮಾಡಲಾಗಿದೆ. ಇದುವರೆಗೂ ಸದರಿ ಯೋಜನೆ ಅಡಿ 1.20ಕೋಟಿ ಫಲನುಭವಿಗಳ ಖಾತೆಗೆ 76500ಕೋಟಿಗೂ ಹೆಚ್ಚು ಹಣ ಪಾವತಿಸಲಾಗಿದೆ.

# ಅಪರಾಧ ಪ್ರಕರಣಗಳನ್ನು ಹಿಂಪಡೆಯಲು ಪರಿಶೀಲನೆಗಾಗಿ ಸಂಪುಟ ಉಪ ಸಮಿತಿ ರಚನೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣಾ ಹಂತದಲ್ಲಿರುವ ಅಪರಾಧ ಪ್ರಕರಣಗಳನ್ನು ಹಿಂಪಡೆಯುವ ಕುರಿತು ಪರಿಶೀಲಿಸಿ ಸೂಕ್ತ ಶಿಫಾರಸ್ಸುಗಳನ್ನು ನೀಡಲು ರಾಜ್ಯ ಸರ್ಕಾರ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದೆ.

ಉಪಸಮಿತಿಯಲ್ಲಿ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವರಾದ ಪ್ರಿಯಾಂಕ್ ಖರ್ಗೆ ಅಧ್ಯಕ್ಷರಾಗಿ ನೇಮಿಸಲಾಗಿದೆ.ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ.

ಸದಸ್ಯರಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡ, ಪೌರಾಡಳಿತ ಸಚಿವ ಹೆಚ್.ಸಿ. ಬಾಲಕೃಷ್ಣ ಹಾಗೂ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರನ್ನು ಒಳಗೊಂಡಿದ್ದಾರೆ.

# ನಿರಂತರ ಹೋರಾಟಕ್ಕೆ ಮಣಿದು ನಾಗೇಂದ್ರ ರಾಜೀನಾಮೆ: ಆರ್.ಅಶೋಕ್

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ-ಜೆಡಿಎಸ್ ನಡೆಸಿದ ನಿರಂತರ ಹೋರಾಟ ಹಾಗೂ ದಾಖಲೆಗಳ ಮೂಲಕ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದ ಪರಿಣಾಮ ಸಚಿವ ಬಿ. ನಾಗೇಂದ್ರ ರಾಜೀನಾಮೆ ನೀಡಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿವೇಶನ ಆರಂಭವಾದ ದಿನದಿಂದ ಎಂಟು ದಿನಗಳ ಕಾಲ ನಿರಂತರವಾಗಿ ಹೋರಾಟ ನಡೆಸಿದ್ದು, ಒಟ್ಟು 37 ದಾಖಲೆಗಳನ್ನು ಸದನದ ಮುಂದಿಟ್ಟಿದ್ದೇವೆ. ದಲಿತರ ಹಣ ದುರ್ಬಳಕೆಯ ವಿರುದ್ಧದ ಹೋರಾಟವನ್ನು ದಲಿತ ವಿರೋಧಿ ನಿಲುವು ಎಂದು ಬಿಂಬಿಸುವುದು ಸರಿಯಲ್ಲ. "ಇದು ಬಿಜೆಪಿಯ ಗೆಲುವಲ್ಲ, ಇಡೀ ದಲಿತ ಸಮುದಾಯಕ್ಕೆ ಸಂದ ಜಯ" ಎಂದರು.



ಅಕ್ರಮವಾಗಿ ವರ್ಗಾವಣೆಯಾದ ಹಣ ವಾಪಸ್ ಬಂದಿದೆ ಎಂಬ ಕಾಂಗ್ರೆಸ್ ನಾಯಕರ ಹೇಳಿಕೆಯನ್ನು ಪ್ರಶ್ನಿಸಿದ ಅಶೋಕ, ಹಣ ಮರಳಿದ ಮಾತ್ರಕ್ಕೆ ಪ್ರಕರಣ ಮುಕ್ತಾಯವಾಗುವುದಿಲ್ಲ. ತಪ್ಪಿತಸ್ಥರನ್ನು ತನಿಖಾ ಸಂಸ್ಥೆಗಳು ಪತ್ತೆಹಚ್ಚಬೇಕು ಮತ್ತು ಅಂತಿಮವಾಗಿ ನ್ಯಾಯಾಲಯವೇ ಶಿಕ್ಷೆ ವಿಧಿಸಬೇಕು ಎಂದು ಹೇಳಿದರು.

ಹಗರಣದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದ ಅಧಿಕಾರಿ ಪಿ.ಚಂದ್ರಶೇಖರನ್ ಅವರ ಕುಟುಂಬಕ್ಕೆ ಇನ್ನೂ ಸಮರ್ಪಕ ನ್ಯಾಯ ದೊರೆತಿಲ್ಲ. ಘೋಷಿಸಲಾಗಿದ್ದ ಸೌಲಭ್ಯಗಳು ಹಾಗೂ ಉದ್ಯೋಗದ ಭರವಸೆಯನ್ನೂ ಈಡೇರಿಸಿಲ್ಲ ಎಂದು ಆರೋಪಿಸಿದರು. ನಾಗೇಂದ್ರ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ಜೆಡಿಎಸ್ ನಾಯಕರೊಂದಿಗೆ ಚರ್ಚಿಸಿ ಕಾರ್ಯತಂತ್ರ ರೂಪಿಸಲಾಗಿತ್ತು. ಸದನದ ಹೊರಗೂ ಪ್ರತಿಭಟನೆ ನಡೆಸಿ, ಕಾಂಗ್ರೆಸ್ ನಾಯಕರ ಆರೋಪಗಳಿಗೆ ದಾಖಲೆಗಳ ಮೂಲಕ ಉತ್ತರ ನೀಡಲಾಯಿತು. ಕೊನೆಗೆ ಹಗಲು-ರಾತ್ರಿ ಧರಣಿ ನಡೆಸುವುದಾಗಿ ಘೋಷಿಸಿದ ಬಳಿಕ ಸರ್ಕಾರ ಇಕ್ಕಟ್ಟಿಗೆ ಸಿಲುಕಿತು ಎಂದು ಅಶೋಕ ಹೇಳಿದರು.

ಎಸ್‌ಸಿಎಸ್‌ಪಿ/ಟಿಎಸ್‌ಪಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗಿದೆ ಎಂಬ ಆರೋಪದ ಬಗ್ಗೆಯೂ ಸರ್ಕಾರ ಸ್ಪಷ್ಟನೆ ನೀಡಬೇಕು. ಬರಗಾಲ, ಕೆಪಿಎಸ್‌ಸಿ ಹಗರಣ, ನೀರಾವರಿ, ನೈಸ್ ಟೋಲ್ ಹಾಗೂ ಬಿಡದಿ ಸೇರಿದಂತೆ ಹಲವು ವಿಷಯಗಳನ್ನು ಮುಂದಿನ ದಿನಗಳಲ್ಲಿ ಸದನದಲ್ಲಿ ಪ್ರಸ್ತಾಪಿಸಿ ಸರ್ಕಾರವನ್ನು ಪ್ರಶ್ನಿಸಲಾಗುವುದು ಎಂದು ಅವರು ತಿಳಿಸಿದರು.

ನಾಗೇಂದ್ರ ಅವರಿಗೆ ಯಾವುದೇ ನ್ಯಾಯಾಲಯದಿಂದ ಕ್ಲೀನ್‌ಚಿಟ್ ಸಿಕ್ಕಿಲ್ಲ. ತನಿಖೆ ಪೂರ್ಣಗೊಂಡು ತಪ್ಪಿತಸ್ಥರು ಯಾರೆಂಬುದು ಬಹಿರಂಗವಾಗಬೇಕು ಎಂದು ಅಶೋಕ ಆಗ್ರಹಿಸಿದರು. ಈ ಹೋರಾಟಕ್ಕೆ ಕೈಜೋಡಿಸಿದ ಬಿಜೆಪಿ-ಜೆಡಿಎಸ್ ಶಾಸಕರು ಹಾಗೂ ಕಾರ್ಯಕರ್ತರಿಗೆ ಧನ್ಯವಾದ ಸಲ್ಲಿಸಿದ ಅವರು, ಜನರ ಹಣದ ದುರ್ಬಳಕೆಯ ವಿರುದ್ಧ ಹೋರಾಟ ಮುಂದುವರಿಯಲಿದೆ ಎಂದರು.

# ನಾಗೇಂದ್ರ ವಿರುದ್ಧವೇ ಸ್ಪರ್ಧೆ: ಶ್ರೀರಾಮುಲು

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಸಚಿವ ಬಿ. ನಾಗೇಂದ್ರ ವಿರುದ್ಧ ವಾಗ್ದಾಳಿ ಮುಂದುವರಿಸಿರುವ ಮಾಜಿ ಸಚಿವ ಬಿ. ಶ್ರೀರಾಮುಲು, "2028ರ ವಿಧಾನಸಭಾ ಚುನಾವಣೆಯಲ್ಲಿ ನಾಗೇಂದ್ರ ಅವರು ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತಾರೋ, ಅದೇ ಕ್ಷೇತ್ರದಿಂದ ನಾನು ಸ್ಪರ್ಧಿಸುತ್ತೇನೆ" ಎಂದು ಸವಾಲು ಹಾಕಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬಿಜೆಪಿ ಪಾದಯಾತ್ರೆಯ ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಅವರು, ಸೆಪ್ಟೆಂಬರ್ 1ರಂದು ಲಿಂಗಸುಗೂರಿನಿಂದ ಆರಂಭವಾಗುವ ಪಾದಯಾತ್ರೆ ಸೆಪ್ಟೆಂಬರ್ 10ರಂದು ಬಳ್ಳಾರಿಯಲ್ಲಿ ಸಮಾರೋಪಗೊಳ್ಳಲಿದೆ. ಒಟ್ಟು ಒಂಬತ್ತು ವಿಧಾನಸಭಾ ಕ್ಷೇತ್ರಗಳಲ್ಲಿ ಪಾದಯಾತ್ರೆ ಸಾಗಲಿದೆ ಎಂದು ತಿಳಿಸಿದರು.

ಲಿಂಗಸುಗೂರಿನಲ್ಲಿ ಬೃಹತ್ ಸಮಾವೇಶದೊಂದಿಗೆ ಪಾದಯಾತ್ರೆಗೆ ಚಾಲನೆ ನೀಡಲಾಗುವುದು. ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಲವು ನಾಯಕರು ಭಾಗವಹಿಸಲಿದ್ದಾರೆ ಎಂದರು.

ಮಸ್ಕಿ, ಸಿಂಧನೂರು, ಕಾರಟಗಿ, ಗಂಗಾವತಿ, ಕಂಪ್ಲಿ, ಸಂಡೂರು ಹಾಗೂ ಬಳ್ಳಾರಿ ಗ್ರಾಮಾಂತರ ಕ್ಷೇತ್ರಗಳ ಮೂಲಕ ಪಾದಯಾತ್ರೆ ಸಾಗಲಿದ್ದು, ಬಳ್ಳಾರಿ ನಗರದಲ್ಲಿ ಸಮಾರೋಪಗೊಳ್ಳಲಿದೆ ಎಂದು ಹೇಳಿದರು.

**ವಾಲ್ಮೀಕಿ ಹಗರಣದ ವಿಚಾರದಲ್ಲಿ ವಾಗ್ದಾಳಿ**




ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಸ್ಥಾನಕ್ಕೆ ನಾಗೇಂದ್ರ ಎರಡು ಬಾರಿ ರಾಜೀನಾಮೆ ನೀಡಿರುವುದು ವಿಶೇಷ ಎಂದು ಶ್ರೀರಾಮುಲು ಟೀಕಿಸಿದರು.

ನಿಗಮದ ಕೋಟ್ಯಂತರ ರೂಪಾಯಿ ಹಣ ಅಕ್ರಮವಾಗಿ ವರ್ಗಾವಣೆಯಾಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದ್ದು, ಈ ವಿಚಾರದಲ್ಲಿ ಬಿಜೆಪಿ ಸದನದ ಒಳಗೆ ಮತ್ತು ಹೊರಗೆ ಹೋರಾಟ ನಡೆಸಿದೆ ಎಂದರು.

ನಾಗೇಂದ್ರ ರಾಜೀನಾಮೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕರು ಹಾಗೂ ವಿಧಾನ ಪರಿಷತ್ ಸದಸ್ಯರು ನಡೆಸಿದ ಹೋರಾಟಕ್ಕೆ ದಲಿತ ಮತ್ತು ಹಿಂದುಳಿದ ವರ್ಗಗಳ ಪರವಾಗಿ ಧನ್ಯವಾದ ಸಲ್ಲಿಸುವುದಾಗಿ ಹೇಳಿದರು.

ನಾಗೇಂದ್ರ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಳ್ಳಬಹುದಾಗಿದ್ದರೂ ಹಾಗೆ ಮಾಡಲಿಲ್ಲ. ವಿರೋಧ ಪಕ್ಷಗಳ ಒತ್ತಡದ ಹಿನ್ನೆಲೆಯಲ್ಲಿ ರಾಜೀನಾಮೆ ಪಡೆಯಬೇಕೆಂಬ ನಿರ್ಧಾರ ಸರ್ಕಾರದಲ್ಲೂ ಇತ್ತು ಎಂದು ಶ್ರೀರಾಮುಲು ಆರೋಪಿಸಿದರು.

**"ಜನತಾ ನ್ಯಾಯಾಲಯದಲ್ಲಿ ತೀರ್ಪು"**

ರಾಜೀನಾಮೆ ನೀಡುವ ಸಂದರ್ಭದಲ್ಲಿ ನಾಗೇಂದ್ರ ಕಣ್ಣೀರು ಹಾಕಿದ್ದನ್ನು ಪ್ರಸ್ತಾಪಿಸಿದ ಶ್ರೀರಾಮುಲು, "ನಿಮ್ಮ ಕಣ್ಣೀರಿಗೆ ಬಿಜೆಪಿ ಕಾರಣವಲ್ಲ. ನಿಮ್ಮ ಅವಧಿಯಲ್ಲಿ ನಡೆದಿರುವ ಆರೋಪಿತ ಅಕ್ರಮಗಳ ವಿರುದ್ಧ ನಾವು ಹೋರಾಟ ಮಾಡಿದ್ದೇವೆ. ಎಸ್‌ಟಿ ಸಮುದಾಯದ ಮಕ್ಕಳ ಭವಿಷ್ಯಕ್ಕಾಗಿ ಹೋರಾಡಿದ್ದೇವೆ" ಎಂದರು.

ಹಗರಣದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಚಂದ್ರಶೇಖರ್ ಅವರ ಕುಟುಂಬದ ಬಗ್ಗೆ ಸರ್ಕಾರ ಹಾಗೂ ಕಾಂಗ್ರೆಸ್ ನಾಯಕರು ಗಮನ ಹರಿಸಿಲ್ಲ ಎಂದು ಆರೋಪಿಸಿದರು. ಈ ಪ್ರಕರಣದ ಪರಿಣಾಮ ಹಾಗೂ ಜನರ ಆಕ್ರೋಶ ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಟ್ಟಲಿದೆ ಎಂದರು.

ಮೀಸಲಾತಿ, ಎಸ್‌ಸಿಪಿ-ಟಿಎಸ್‌ಪಿ ಅನುದಾನ ಸೇರಿದಂತೆ ವಿವಿಧ ವಿಚಾರಗಳಲ್ಲಿ ಕಾಂಗ್ರೆಸ್ ದಲಿತರಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದ ಶ್ರೀರಾಮುಲು, "ಮುಂದಿನ ಚುನಾವಣೆಯಲ್ಲಿ ಜನತಾ ನ್ಯಾಯಾಲಯವೇ ತೀರ್ಪು ನೀಡಲಿದೆ.

ನಾಗೇಂದ್ರ ಅವರು ಚುನಾವಣೆಗೆ ಸ್ಪರ್ಧಿಸುವಂತೆ ನನಗೆ ಸವಾಲು ಹಾಕಿದ್ದಾರೆ. ಅವರು ಎಲ್ಲಿ ಸ್ಪರ್ಧಿಸುತ್ತಾರೋ ಅಲ್ಲೇ ನಾನು ಸ್ಪರ್ಧಿಸುತ್ತೇನೆ" ಎಂದು ಪುನರುಚ್ಚರಿಸಿದರು.

ಕಾಂಗ್ರೆಸ್ ಸರ್ಕಾರವನ್ನು ಜನರು ಮುಂದಿನ ಚುನಾವಣೆಯಲ್ಲಿ ತಿರಸ್ಕರಿಸಲಿದ್ದಾರೆ. ನಾಗೇಂದ್ರ ಅವರ ರಾಜಕೀಯ ಭವಿಷ್ಯ ಮಾತ್ರವಲ್ಲ, ಇಡೀ ಕಾಂಗ್ರೆಸ್ ಪಕ್ಷದ ಭವಿಷ್ಯವನ್ನೂ ಜನರು ನಿರ್ಧರಿಸಲಿದ್ದಾರೆ ಎಂದು ಅವರು ಹೇಳಿದರು.

**"ಸಚಿವ ಸ್ಥಾನಕ್ಕೆ ವ್ಯಾಲಿಡಿಟಿ ಮುಗಿದಿದೆ"**

ನಾಗೇಂದ್ರ ಅವರನ್ನು ಸಚಿವರನ್ನಾಗಿ ಮಾಡಿರುವ ವಿಚಾರದಲ್ಲೂ ವ್ಯಂಗ್ಯವಾಡಿದ ಶ್ರೀರಾಮುಲು, "ಸೂಟ್‌ಕೇಸ್ ನೀಡಿ ಸಚಿವರನ್ನಾಗಿ ಮಾಡಲಾಗಿತ್ತು. ಆ ಸೂಟ್‌ಕೇಸ್‌ನ ವ್ಯಾಲಿಡಿಟಿ ಈಗ ಮುಗಿದಿದೆ" ಎಂದು ಟೀಕಿಸಿದರು.

ದಲಿತ ನಾಯಕ ಕೆ.ಎನ್. ರಾಜಣ್ಣ ಅವರನ್ನೂ ಸಚಿವ ಸ್ಥಾನದಿಂದ ತೆಗೆದುಹಾಕಲಾಗಿದೆ. ಅವರನ್ನು ಬಲಿಪಶು ಮಾಡಿರುವ ಕಾಂಗ್ರೆಸ್ ಈಗ ದಲಿತರ ಬಗ್ಗೆ ಮಾತನಾಡುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

"ಜನರ ಹಣವನ್ನು ಕಾಂಗ್ರೆಸ್‌ಗೆ ಒತ್ತೆ ಇಡುವ ಕೆಲಸ ನಡೆದಿದೆ. ಇಂದು ನಾಗೇಂದ್ರ ಮನೆಗೆ ಹೋಗಿದ್ದಾರೆ; ಮುಂದಿನ ಚುನಾವಣೆಯಲ್ಲಿ ಇಡೀ ಕಾಂಗ್ರೆಸ್ ಪಕ್ಷವೇ ಮನೆಗೆ ಹೋಗಲಿದೆ" ಎಂದು ಶ್ರೀರಾಮುಲು ವಾಗ್ದಾಳಿ ನಡೆಸಿದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ನಾಗೇಂದ್ರ ರಾಜೀನಾಮೆ ಹಿಂದೆ ಕಾಂಗ್ರೆಸ್‌ನೊಳಗೇ ರಾಜಕೀಯ ಲೆಕ್ಕಾಚಾರ?

● ವಿಕ್ರಮ ವಾಹಿನಿ | ಬೆಂಗಳೂರು

ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಯ ಬೆನ್ನಲ್ಲೇ ಕಾಂಗ್ರೆಸ್‌ನ ಆಂತರಿಕ ರಾಜಕೀಯದಲ್ಲಿ ಹೊಸ ಚರ್ಚೆ ಆರಂಭವಾಗಿದ್ದು, ವಿರೋಧ ಪಕ್ಷಗಳ ಹೋರಾಟದ ಜತೆಗೆ ಪಕ್ಷದೊಳಗಿನ ಭಿನ್ನಾಭಿಪ್ರಾಯಗಳೂ ರಾಜೀನಾಮೆಗೆ ಕಾರಣವಾಗಿವೆಯೇ ಎಂಬ ಪ್ರಶ್ನೆ ಉದ್ಭವಿಸಿದೆ.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ದುರುಪಯೋಗ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಹಾಗೂ ಸಿಬಿಐ ತನಿಖೆ ನಡೆಸಿದ್ದು, ನಾಗೇಂದ್ರ ಅವರ ಪಾತ್ರದ ಬಗ್ಗೆಯೂ ತನಿಖಾ ದಾಖಲೆಗಳಲ್ಲಿ ಉಲ್ಲೇಖವಾಗಿದೆ ಎನ್ನಲಾಗಿದೆ. ಈವರೆಗೆ ನಾಗೇಂದ್ರ ಅವರಿಂದ ಯಾವುದೇ ಹಣ ವಶಪಡಿಸಿಕೊಂಡಿಲ್ಲ ಎಂಬ ಅಂಶವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ನಾಯಕರು ಅವರ ಪರ ನಿಂತಿದ್ದರು. ಆದರೆ, ಸಿಬಿಐ ರಾಜ್ಯಪಾಲರಿಂದ ಅಭಿಯೋಜನೆಗೆ ಅನುಮತಿ ಕೋರುವ ಪ್ರಕ್ರಿಯೆ ಆರಂಭಿಸಿದ ಬಳಿಕ ಪರಿಸ್ಥಿತಿ ಬದಲಾಗಿದೆ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ನಡೆಯುತ್ತಿದೆ.

ನಾಗೇಂದ್ರ ಅವರು ರಾಜ್ಯ ಕಾಂಗ್ರೆಸ್ ನಾಯಕರ ಆಯ್ಕೆಯಾಗಿರದೆ, ಹೈಕಮಾಂಡ್ ಬೆಂಬಲದಿಂದ ಸಚಿವ ಸ್ಥಾನ ಪಡೆದಿದ್ದರು ಎಂಬ ಅಸಮಾಧಾನ ಪಕ್ಷದೊಳಗಿತ್ತು ಎನ್ನಲಾಗಿದೆ.

ಪರಿಶಿಷ್ಟ ಪಂಗಡದ ಪ್ರಭಾವಿ ನಾಯಕರಾಗಿ ಗುರುತಿಸಿಕೊಂಡಿದ್ದ ಅವರು ಭವಿಷ್ಯದಲ್ಲಿ ಸಮುದಾಯದ ಪ್ರಮುಖ ನಾಯಕನಾಗಿ ಬೆಳೆಯುವ ಸಾಧ್ಯತೆಯೂ ಇತ್ತು. ಇದು ಪಕ್ಷದೊಳಗಿನ ಕೆಲ ನಾಯಕರಿಗೆ ಅಸಮಾಧಾನ ಉಂಟುಮಾಡಿತ್ತು ಎಂಬ ಮಾತುಗಳು ಕೇಳಿಬರುತ್ತಿವೆ.

**ದಿಢೀರ್ ರಾಜೀನಾಮೆ ಹಲವು ಪ್ರಶ್ನೆ**

ವಿಧಾನಮಂಡಲ ಅಧಿವೇಶನದ ವೇಳೆ ಬಿಜೆಪಿ–ಜೆಡಿಎಸ್ ಸದಸ್ಯರು ನಿರಂತರ ಪ್ರತಿಭಟನೆ ನಡೆಸಿದರೂ, ನಾಗೇಂದ್ರ ರಾಜೀನಾಮೆ ನೀಡುವ ಬಗ್ಗೆ ಕಾಂಗ್ರೆಸ್ ನಾಯಕರು ಯಾವುದೇ ಸ್ಪಷ್ಟ ಸುಳಿವು ನೀಡಿರಲಿಲ್ಲ. ಬಿಜೆಪಿ ಪಾದಯಾತ್ರೆಗೂ ತಾವು ಹೆದರುವುದಿಲ್ಲ ಎಂದು ಕಾಂಗ್ರೆಸ್ ನಾಯಕರು ಹೇಳಿಕೆ ನೀಡಿದ್ದರು. ನಾಗೇಂದ್ರ ಅವರೂ ಪ್ರತಿಯಾಗಿ ಹೋರಾಟ ನಡೆಸಲು ಸಿದ್ಧತೆ ನಡೆಸಿದ್ದರು ಎನ್ನಲಾಗಿದೆ. ಹೀಗಿದ್ದರೂ ದಿಢೀರ್ ರಾಜೀನಾಮೆ ನೀಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಮುಖ್ಯಮಂತ್ರಿ ಸೇರಿದಂತೆ ಕಾಂಗ್ರೆಸ್‌ನ ಹಲವು ನಾಯಕರು ನಾಗೇಂದ್ರ ಅವರ ರಾಜೀನಾಮೆ ತಮಗೆ ನೋವು ತಂದಿದೆ ಎಂದು ಹೇಳಿದ್ದರೂ, ಪಕ್ಷದೊಳಗಿನ ರಾಜಕೀಯ ಲೆಕ್ಕಾಚಾರಗಳೇ ಅವರ ರಾಜೀನಾಮೆಗೆ ಕಾರಣವಾಗಿವೆಯೇ ಎಂಬ ಚರ್ಚೆ ಮುಂದುವರಿದಿದೆ.

**ರಾಜೀನಾಮೆ ರಾಜಕೀಯ ಅಸ್ತ್ರ?**

ನಾಗೇಂದ್ರ ಅವರ ರಾಜೀನಾಮೆಯನ್ನು ರಾಜಕೀಯವಾಗಿ ಬಳಸಿಕೊಂಡು ಬಿಜೆಪಿ ಶೋಷಿತ ವರ್ಗಗಳ ವಿರೋಧಿ ಎಂಬ ಸಂದೇಶವನ್ನು ಜನರಿಗೆ ತಲುಪಿಸಲು ಕಾಂಗ್ರೆಸ್ ಮುಂದಾಗಬಹುದು ಎನ್ನಲಾಗುತ್ತಿದೆ. ನಾಗೇಂದ್ರ ಪ್ರಕರಣದಲ್ಲಿ ರಾಜ್ಯಪಾಲರು ಅಭಿಯೋಜನೆಗೆ ಅನುಮತಿ ನೀಡುವ ವಿಚಾರದಲ್ಲಿ ಸಚಿವ ಸಂಪುಟದ ಅಭಿಪ್ರಾಯ ಕೇಳಿರುವುದನ್ನೂ ಕಾಂಗ್ರೆಸ್ ಪ್ರಶ್ನಿಸುತ್ತಿದೆ.

ಇದರ ಹಿಂದೆ ಬಿಜೆಪಿ ನಾಯಕರ ಒತ್ತಡವಿದೆ ಎಂದು ಕಾಂಗ್ರೆಸ್ ಆರೋಪಿಸುತ್ತಿದ್ದರೆ, ಮತ್ತೊಂದೆಡೆ ಶೋಷಿತ ಸಮುದಾಯದ ನಾಯಕನೊಬ್ಬ ಅಧಿಕಾರದಲ್ಲಿರುವುದನ್ನು ಕೆಲವರು ಸಹಿಸಿಕೊಳ್ಳುತ್ತಿಲ್ಲ ಎಂಬ ರಾಜಕೀಯ ಸಂದೇಶವನ್ನು ಬಿಂಬಿಸುವ ಪ್ರಯತ್ನವೂ ನಡೆಯಬಹುದು ಎಂಬ ವಿಶ್ಲೇಷಣೆಗಳಿವೆ.

ಇದೇ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಇತ್ತೀಚೆಗೆ ಶಂಭೂಕನ ಪ್ರಸಂಗವನ್ನು ಪ್ರಸ್ತಾಪಿಸಿರುವುದು ಕೂಡ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

**ಕೆಪಿಸಿಸಿ ಹುದ್ದೆಯತ್ತ ಚಿತ್ತ?**


ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ನಾಗೇಂದ್ರ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸ್ಥಾನ ನೀಡುವ ಬಗ್ಗೆಯೂ ಕಾಂಗ್ರೆಸ್‌ನಲ್ಲಿ ಚರ್ಚೆ ನಡೆಯುತ್ತಿದೆ ಎನ್ನಲಾಗಿದೆ. ಪಕ್ಷದ ಕೆಲ ನಾಯಕರೇ ತಮ್ಮ ರಾಜೀನಾಮೆಗೆ ಕಾರಣರಾಗಿದ್ದಾರೆ ಎಂಬ ಅಸಮಾಧಾನ ನಾಗೇಂದ್ರ ಅವರಲ್ಲಿದೆ ಎಂಬ ಮಾತುಗಳೂ ಕೇಳಿಬರುತ್ತಿವೆ.

ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡುವುದಾಗಿ ನಾಗೇಂದ್ರ ಹೇಳಿರುವುದು ಕಾಂಗ್ರೆಸ್ ನಾಯಕತ್ವದ ಮೇಲೆ ಒತ್ತಡ ಹೇರುವ ತಂತ್ರವೇ ಎಂಬ ಪ್ರಶ್ನೆಯೂ ಎದ್ದಿದೆ. ಒಟ್ಟಿನಲ್ಲಿ, ನಾಗೇಂದ್ರ ರಾಜೀನಾಮೆಯನ್ನು ಬಿಜೆಪಿ–ಜೆಡಿಎಸ್ ತಮ್ಮ ಹೋರಾಟದ ಗೆಲುವೆಂದು ಬಿಂಬಿಸುತ್ತಿದ್ದರೆ, ಕಾಂಗ್ರೆಸ್‌ನೊಳಗಿನ ರಾಜಕೀಯ ಲೆಕ್ಕಾಚಾರಗಳೂ ಈ ಬೆಳವಣಿಗೆಯ ಹಿಂದೆ ಪ್ರಮುಖ ಪಾತ್ರ ವಹಿಸಿವೆಯೇ ಎಂಬ ಚರ್ಚೆ ಇದೀಗ ತೀವ್ರಗೊಂಡಿದೆ.

## ಡಿ.ಕೆ.ಶಿ ಬಾಲ್ಯ ಸ್ನೇಹಿತ ಕ್ರೇಜಿಸ್ಟಾರ್ ರವಿಚಂದ್ರನ್ ವಿಧಾನಪರಿಷತ್ತಿಗೆ?

● ವಿಕ್ರಮ ವಾಹಿನಿ | ಬೆಂಗಳೂರು

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಬಾಲ್ಯದ ಸ್ನೇಹಿತ, ಕನ್ನಡದ ಹಿರಿಯ ನಟ, ನಿರ್ದೇಶಕ, ನಿರ್ಮಾಪಕ 'ಕ್ರೇಜಿ ಸ್ಟಾರ್' ವಿ. ರವಿಚಂದ್ರನ್ ಅವರನ್ನು ಕಾಂಗ್ರೆಸ್, ವಿಧಾನ ಪರಿಷತ್ತಿಗೆ ಆಯ್ಕೆ ಮಾಡುವುದು ಬಹುತೇಕ ಖಚಿತವಾಗಿದೆ.



ಇತ್ತೀಚೆಗಷ್ಟೇ ನಟ ರವಿಚಂದ್ರನ್ ಅವರು ತಮ್ಮ ಬಾಲ್ಯದ ಸ್ನೇಹಿತ, ಸಿಎಂ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದರು. ಈ ವಿಚಾರ ರಾಜ್ಯದ ಜನರ ಗಮನ ಸೆಳೆದಿತ್ತು. ಅಲ್ಲದೆ, ಈ ಭೇಟಿಯ ಹಿಂದಿನ ಉದ್ದೇಶವೇನು ಎಂದು ನಟನ ಅಭಿಮಾನಿಗಳೂ ಸಹ ತಲೆ ಕೆಡಿಸಿಕೊಂಡಿದ್ದರು. ಇದೀಗ ಕ್ರೇಜಿ ಸ್ಟಾರ್ ರವಿಚಂದ್ರನ್ ಅವರು ರಾಜಕೀಯ ಅಖಾಡ ಪ್ರವೇಶಿಸುತ್ತಿರುವ ವಿಚಾರ ಬಹಿರಂಗವಾಗಿದೆ.

ಕನ್ನಡ ಚಿತ್ರರಂಗದಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಅಪಾರ ಕೊಡುಗೆ ನೀಡಿರುವ ರವಿಚಂದ್ರನ್ ಅವರ ಕಲಾ ಸೇವೆಯನ್ನು ಗುರುತಿಸಿ ಕಾಂಗ್ರೆಸ್ ಸರ್ಕಾರ ಅವರನ್ನು ವಿಧಾನ ಪರಿಷತ್ ಗೆ ನಾಮ ನಿರ್ದೇಶನ ಮಾಡಲು ನಿರ್ಧರಿಸಿದೆ ಎನ್ನಲಾಗಿದೆ.

ಡಿಕೆ ಶಿವಕುಮಾರ್ ಅವರ ಕ್ಲಾಸ್‌ಮೇಟ್ ಆಗಿರುವ ರವಿಚಂದ್ರನ್ ಅವರ ಹೆಸರನ್ನು ಸಾಂಸ್ಕೃತಿಕ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ನಾಮನಿರ್ದೇಶನ ಮಾಡಲು ಕಾಂಗ್ರೆಸ್ ಹೈಕಮಾಂಡ್ ಗ್ರೀನ್ ಸಿಗ್ನಲ್ ನೀಡಿದ್ದು, , ಶೀಘ್ರದಲ್ಲೇ ಅಧಿಕೃತ ಘೋಷಣೆ ಹೊರಬೀಳುವ ಸಾಧ್ಯತೆಯಿದೆ.



ಬೆಂಗಳೂರಿನ ಲಾಲ್‌ಬಾಗ್ ನಲ್ಲಿ ಟನಲ್ ರಸ್ತೆ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿ ಬಸವನಗುಡಿಯ ನಾಗರಿಕರು ಪತ್ರ ಚಳವಳಿ ನಡೆಸಿದರು. ಎನ್ ಆರ್ ಕಾಲೋನಿ ಬಸ್ ನಿಲ್ದಾಣದ ಬಳಿ ಸೇರಿದ ನಾಗರಿಕರು, ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಟನಲ್ ರಸ್ತೆ ಲಾಲ್ ಬಾಗ್ ನಲ್ಲಿ ಬರುವುದು ಬೇಡ ಎಂದು ಮನವಿ ಮಾಡಿದರು.

## ಕಾಂಗ್ರೆಸ್ಸಿನ ದಲಿತ ವಿರೋಧಿ ನೀತಿ ವಿರುದ್ಧ ಹೋರಾಟ

● ವಿಕ್ರಮ ವಾಹಿನಿ | ಬೆಂಗಳೂರು

ಸೆ.1ರಿಂದ ಬಿಜೆಪಿ ವತಿಯಿಂದ ನಡೆಯುವ ಪಾದಯಾತ್ರೆಗೆ ಕಾರಣ ಕೇವಲ ಒಂದೇ ಅಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ. ದಲಿತ ವಿರೋಧಿ ನೀತಿ ಖಂಡಿಸಿ ಕಾಂಗ್ರೆಸ್ ವಿರುದ್ಧ ನಮ್ಮ ಹೋರಾಟ ನಡೆಯುತ್ತಿದೆ ಎಂದು ವಿವರಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ಪಾದಯಾತ್ರೆ ಮುಂದುವರೆಯಲಿದೆ ಎಂದರು. ಪರಿಶಿಷ್ಟರಿಗಾಗಿ ಮೀಸಲಿಟ್ಟ ಎಸ್‌ಇಪಿ, ಟಿಎಸ್‌ಪಿಯ 53 ಸಾವಿರ ಕೋಟಿ ರೂಪಾಯಿಗಳನ್ನು ಈ ಸರಕಾರ ಅವರ ಅಭ್ಯುದಯಕ್ಕೆ ಇಡುವ ಬದಲು ಬೇರೆ ಬೇರೆ ಕಾರ್ಯಗಳಿಗೆ ದುರುಪಯೋಗ ಮಾಡಿಕೊಂಡಿದೆ ಎಂದು ಆಕ್ಷೇಪಿಸಿದರು. ಆ ಹಣ ಆ ಜನಾಂಗಕ್ಕೆ ತಲುಪಬೇಕು ಎಂದು ಆಗ್ರಹಿಸಿದರು.

ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಬೇಕು. ಇಡೀ ದೇಶದಲ್ಲಿ ಪರಿಶಿಷ್ಟ ವರ್ಗಕ್ಕೆ ಶೇ 7.5 ಮೀಸಲಾತಿ ಇದೆ. ರಾಜ್ಯದಲ್ಲಿ ಯಾಕಿಲ್ಲ ಎಂದು ಕೇಳಿದರು. ವಾಲ್ಮೀಕಿ ಸಮಾಜದ ಸ್ವಾಮೀಜಿ ವರ್ಷಗಟ್ಟಲೆ ಫ್ರೀಡಂ ಪಾರ್ಕಿನಲ್ಲಿ ಹೋರಾಟ ಮಾಡಿದ್ದರು. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಇದ್ದಾಗ ಶ್ರೀರಾಮುಲು ಮತ್ತಿತರರು ಹೋರಾಟ ಮಾಡಿ ಎಸ್‌ಸಿ, ಎಸ್‌ಟಿ ಮೀಸಲಾತಿ ಪ್ರಮಾಣ ಹೆಚ್ಚಿಸಿದ್ದರು. ಜಾರಿಗೆ ಬಂದಿದ್ದನ್ನು ಇವರು ಕಡಿಮೆ ಮಾಡಿದ್ದಾರೆ ಎಂದು ಟೀಕಿಸಿದರು.

ಅದನ್ನು ಮತ್ತೆ ಶೇ 7 ಮತ್ತು 17ಕ್ಕೆ ಏರಿಸಬೇಕೆಂಬ ನಮ್ಮ ಬೇಡಿಕೆ ಇದೆ. ವಾಲ್ಮೀಕಿ ನಿಗಮದ 187 ಕೋಟಿ ಬೇರೆ ಬೇರೆ ಕಾರಣಕ್ಕೆ ಹೋದುದು ವಾಪಸ್ ಬರಬೇಕಲ್ಲವೇ ಎಂದು ಕೇಳಿದರು.

ಪರಿಶಿಷ್ಟ ಜಾತಿ, ವರ್ಗಗಳಿಗೆ ಬಹಳಷ್ಟು ಅನ್ಯಾಯ ಆಗುತ್ತಿದೆ. ಅವರಿಗೆ ನ್ಯಾಯ ಕೊಡಿಸುವವರು ಯಾರು ಎಂದು ಪ್ರಶ್ನಿಸಿದರು. ವಿರೋಧ ಪಕ್ಷಗಳು ಹೋರಾಟ ಮಾಡಬೇಕೇ ಬೇಡವೇ ಎಂದು ಕೇಳಿದರು. ಮೀಸಲಾತಿ ಕಡಿಮೆ ಮಾಡಿದಾಗ ಈ 15 ಜನ ಕಾಂಗ್ರೆಸ್ಸಿನ ಶಾಸಕರು ಚುರುಮುರಿ ತಿನ್ನುತ್ತಿದ್ದರೇ ಎಂದು ಪ್ರಶ್ನೆ ಹಾಕಿದರು.

### ಬೆಂಕಿ ಹಾಕಿದವರ ಪರ ನಿಂತಿದ್ದೀರಿ..



ಎನ್.ರಾಚಯ್ಯ ಅವರನ್ನು ಬಲಿ ಪಡೆದಿರಲ್ಲವೇ? ಹಾವನೂರರನ್ನು ಎಂಥ ಗತಿಗೆ ತಂದಿರಿ ನೀವು? ಅಖಂಡ ಶ್ರೀನಿವಾಸಮೂರ್ತಿ ಅವರ ಮನೆಗೆ ಬೆಂಕಿ ಹಾಕಿ ಸುಟ್ಟರು. ಅವರ ಪರವಾಗಿ ನೀವು ನಿಲ್ಲಲಿಲ್ಲ. ಬೆಂಕಿ ಹಾಕಿದವರ ಪರ ನಿಂತಿದ್ದೀರಿ ಎಂದು ಟೀಕಿಸಿದರು. ಅವರಿಗೆ ಟಿಕೆಟ್ ಕೂಡ ನೀಡಲಿಲ್ಲ ಎಂದು ಆಕ್ಷೇಪಿಸಿದರು. 10 ಅಂಶಗಳನ್ನು ಮುಂದಿಟ್ಟು ಹೊರಟಿದ್ದೇವೆ. ಒಂದಕ್ಕೆ ಉತ್ತರ ಲಭಿಸಿದೆ. ಇನ್ನೂ 9ಕ್ಕೆ ಉತ್ತರ ಸಿಗಬೇಕಿದೆ ಎಂದರು.

ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ. ಸಿ.ಎನ್. ಅಶ್ವಥನಾರಾಯಣ್, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಎಸ್.ಟಿ. ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು, ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರಿ ಅವರು ಹಾಜರಿದ್ದರು.

## ಬಿಟ್‌ಕಾಯಿನ್ ಹಗರಣ: ಶ್ರೀಕಿ, ರಾಬಿನ್‌ಗೆ ಜಾಮೀನು ನಿರಾಕರಣೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯಾದ್ಯಂತ ಭಾರಿ ಚರ್ಚೆಗೆ ಗ್ರಾಸವಾಗಿದ್ದ ಬಿಟ್‌ಕಾಯಿನ್ ಹಗರಣ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಪ್ರಮುಖ ಆರೋಪಿಗಳಾದ ಕುಖ್ಯಾತ ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಹಾಗೂ ಕ್ರಿಪ್ಟೊ ಕರೆನ್ಸಿ ಟ್ರೇಡರ್ ರಾಬಿನ್ ಖಂಡೇವಾಲಾಗೆ ನ್ಯಾಯಾಲಯದಲ್ಲಿ ಹಿನ್ನಡೆಯಾಗಿದೆ. ಇಬ್ಬರೂ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಬೆಂಗಳೂರಿನ ವಿಶೇಷ ಪಿಎಂಎಲ್ಎ ನ್ಯಾಯಾಲಯ ತಿರಸ್ಕರಿಸಿದೆ.

ಸದ್ಯ ಇಬ್ಬರೂ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ. ಸರ್ಕಾರಿ ಹಾಗೂ ಖಾಸಗಿ ಜಾಲತಾಣಗಳು, ಕ್ರಿಪ್ಟೊ ಎಕ್ಸ್‌ಚೇಂಜ್‌ಗಳು ಮತ್ತು ಆನ್‌ಲೈನ್ ಗೇಮಿಂಗ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿ ಕೋಟ್ಯಂತರ ರೂ. ಮೌಲ್ಯದ ಬಿಟ್‌ಕಾಯಿನ್ ಸೇರಿದಂತೆ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಿದ ಆರೋಪ ಶ್ರೀಕಿ ವಿರುದ್ಧವಿದೆ.

ಇಡಿ ತನಿಖೆಯ ಪ್ರಕಾರ, ಶ್ರೀಕಿ ಹ್ಯಾಕ್ ಮಾಡಿ ಕಳವು ಮಾಡಿದ್ದ ಬಿಟ್‌ಕಾಯಿನ್ ಹಾಗೂ ಇತರ ಡಿಜಿಟಲ್ ಆಸ್ತಿಗಳನ್ನು ರಾಬಿನ್ ಖಂಡೇವಾಲಾ ನಗದಾಗಿ ಪರಿವರ್ತಿಸಿ, ವಿವಿಧ ವ್ಯಕ್ತಿಗಳಿಗೆ ಹಣ ವರ್ಗಾವಣೆ ಮಾಡುತ್ತಿದ್ದ ಎನ್ನಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಈಗಾಗಲೇ ದೋಷಾರೋಪಣ ಪಟ್ಟಿ ಸಲ್ಲಿಸಿದೆ.

ಜಾಮೀನು ಅರ್ಜಿ ವಿಚಾರಣೆ ವೇಳೆ ಇಡಿ ಪರ ವಿಶೇಷ ಅಭಿಯೋಜಕ ಮಧು ಎನ್. ರಾವ್, ಆರೋಪಗಳ ಗಂಭೀರತೆ ಹಾಗೂ ತನಿಖೆಯಲ್ಲಿ ಲಭ್ಯವಾಗಿರುವ ಸಾಕ್ಷ್ಯಗಳನ್ನು ನ್ಯಾಯಾಲಯದ ಗಮನಕ್ಕೆ ತಂದರು. ಆರೋಪಿಗಳಿಗೆ ಜಾಮೀನು ನೀಡಿದರೆ ತನಿಖೆ ಮತ್ತು ಸಾಕ್ಷ್ಯಾಧಾರಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ವಾದಿಸಿದರು. ಉಭಯ ಪಕ್ಷಗಳ ವಾದ ಆಲಿಸಿದ ನ್ಯಾಯಾಲಯ, ಆರೋಪಗಳ ಗಂಭೀರತೆಯನ್ನು ಪರಿಗಣಿಸಿ ಜಾಮೀನು ನಿರಾಕರಿಸಿತು.

ಪ್ರಕರಣದ ತನಿಖೆ ಚುರುಕುಗೊಳಿಸಿದ್ದ ಇಡಿ ಅಧಿಕಾರಿಗಳು 2026ರ ಏಪ್ರಿಲ್‌ನಲ್ಲಿ ಬೆಂಗಳೂರಿನ ವಿವಿಧೆಡೆ ದಾಳಿ ನಡೆಸಿ ಶೋಧ ನಡೆಸಿದ್ದರು. ಜಾಲತಾಣಗಳು, ಕ್ರಿಪ್ಟೊ ಎಕ್ಸ್‌ಚೇಂಜ್‌ಗಳು ಹಾಗೂ ಆನ್‌ಲೈನ್ ಗೇಮಿಂಗ್ ತಾಣಗಳನ್ನು ಹ್ಯಾಕ್ ಮಾಡಿ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಲಾಗುತ್ತಿತ್ತು. ಬಳಿಕ ಕಳವು ಮಾಡಿದ ಕ್ರಿಪ್ಟೊ ಆಸ್ತಿಗಳನ್ನು ವಿವಿಧ ಟ್ರೇಡಿಂಗ್ ಚಾನೆಲ್‌ಗಳು ಮತ್ತು ಬ್ಯಾಂಕ್ ಖಾತೆಗಳ ಮೂಲಕ ಪರಿವರ್ತಿಸಿ, ಹಣದ ಮೂಲವನ್ನು ಮರೆಮಾಚಲು ಪ್ರಯತ್ನಿಸಲಾಗಿದೆ ಎಂಬುದು ತನಿಖಾ ಸಂಸ್ಥೆಗಳ ಆರೋಪವಾಗಿದೆ.

## ಇಸ್ರೋ ಉದ್ಯೋಗದ ಹೆಸರಿನಲ್ಲಿ ವಂಚನೆ: ಆರೋಪಿ ಬಂಧನ

● ವಿಕ್ರಮ ವಾಹಿನಿ | ಗದಗ

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯಲ್ಲಿ (ಇಸ್ರೋ) ಉದ್ಯೋಗ ಕೊಡಿಸುವುದಾಗಿ ನಂಬಿಸಿ 30ಕ್ಕೂ ಹೆಚ್ಚು ಯುವಕ–ಯುವತಿಯರಿಂದ ಲಕ್ಷಾಂತರ ರೂಪಾಯಿ ಪಡೆದು ವಂಚಿಸಿದ ಆರೋಪದ ಮೇಲೆ ವಿಜಯಪುರ ಮೂಲದ ಈರಣ್ಣ ಬಡಿಗೇರ್ ಎಂಬಾತನನ್ನು ಗದಗ ಶಹರ ಪೊಲೀಸರು ಬಂಧಿಸಿದ್ದಾರೆ.

ಡಿಪ್ಲೊಮಾ ವ್ಯಾಸಂಗ ಮಾಡುತ್ತಿದ್ದ ಈರಣ್ಣ, ಸಾಮಾಜಿಕ ಜಾಲತಾಣದಲ್ಲಿ ನಕಲಿ ಖಾತೆ ಸೃಷ್ಟಿಸಿ ತಾನು ಇಸ್ರೋದಲ್ಲಿ ಕೆಲಸ ಮಾಡುತ್ತಿರುವುದಾಗಿ ಪರಿಚಯಿಸಿಕೊಂಡಿದ್ದ ಎನ್ನಲಾಗಿದೆ. ಉದ್ಯೋಗದ ನಿರೀಕ್ಷೆಯಲ್ಲಿದ್ದ ಯುವಕ–ಯುವತಿಯರನ್ನು ಸಂಪರ್ಕಿಸಿ, ವಿವಿಧ ಹುದ್ದೆಗಳಿಗೆ ನೇಮಕ ಮಾಡಿಸುವುದಾಗಿ ಭರವಸೆ ನೀಡಿ ಫೋನ್ ಪೇ ಮೂಲಕ ಹಣ ಪಡೆದುಕೊಳ್ಳುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಈತನಿಂದ ಹಣ ಕಳೆದುಕೊಂಡ ಕೆಲ ಯುವಕರು ಅನುಮಾನಗೊಂಡು ಆರೋಪಿಯನ್ನು ಪತ್ತೆಹಚ್ಚಿ ಪೊಲೀಸರಿಗೆ ಒಪ್ಪಿಸಿದ್ದಾರೆ. ವಿಚಾರಣೆ ವೇಳೆ ಸಾಲ ತೀರಿಸಲು ವಂಚನೆ ನಡೆಸಿದ್ದಾಗಿ ಆರೋಪಿ ಹೇಳಿಕೊಂಡಿದ್ದಾನೆ ಎನ್ನಲಾಗಿದೆ.

ಆರೋಪಿಯ ಮೊಬೈಲ್ ಪರಿಶೀಲನೆ ವೇಳೆ ಅಶ್ಲೀಲ ವಿಡಿಯೋಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣದ ಮತ್ತೊಂದು ಆಯಾಮದಲ್ಲೂ ತನಿಖೆ ನಡೆಸುತ್ತಿದ್ದಾರೆ. ಉದ್ಯೋಗದ ನೆಪದಲ್ಲಿ ಯುವತಿಯರನ್ನು ವಂಚಿಸಿರುವ ಅಥವಾ ಶೋಷಿಸಿರುವ ಸಾಧ್ಯತೆಯ ಬಗ್ಗೆಯೂ ಪರಿಶೀಲನೆ ನಡೆಯುತ್ತಿದೆ.

## 'ಜಿಮ್' ಸಂಸ್ಕೃತಿಯ ಅತಿಯಾದ ವ್ಯಾಯಾಮ ಜೀವಕ್ಕೇ ಕಂಟಕ

● ವಿಕ್ರಮ ವಾಹಿನಿ | ಗೋಕರ್ಣ

ವಾಹನ ಚಲಿಸಲು ಇಂಧನ ಶಕ್ತಿ ಹಾಗೂ ಚಾಲನಾ ನಿಯಂತ್ರಣ ಬೇಕು. ಹಾಗೆಯೇ, ದೇಹವೆಂಬ ವಾಹನವು ಚಲಿಸಲು ಮನಸ್ಸು ಮತ್ತು ಓಜಸ್ಸುಗಳೆಂಬ ಶಕ್ತಿ ಅಗತ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.



ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 29.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಮನಸ್ಸು ನಮ್ಮ ನಿಯಂತ್ರಣ ಶಕ್ತಿಯಾಗಿದ್ದು, ಅನ್ನದ ಸೂಕ್ಷ್ಮಾಂಶದಿಂದ ಮನಸ್ಸು ನಿರ್ಮಿತವಾಗಿದೆ ಮತ್ತು ದೇಹದ ಶಕ್ತಿ ದ್ರವವಾದ ಓಜಸ್ಸು ಕೂಡ ಅನ್ನದಿಂದಲೇ ಪೋಷಿಸಲ್ಪಟ್ಟಿದೆ. ಹೀಗೆ ದೇಹದ ನಿಯಂತ್ರಣಾ ಶಕ್ತಿ ಹಾಗೂ ಪೋಷಕ ಶಕ್ತಿಗಳೆರಡೂ ಆಹಾರವನ್ನೇ ಅವಲಂಭಿಸಿದೆ ಎಂದು ಆಹಾರದ ಮಹತ್ವವನ್ನು ವಿವರಿಸಿದರು.

ಉಪವಾಸದಿಂದ ದೇಹದ ಧಾತುಗಳು ಕ್ಷೀಣವಾಗುತ್ತದೆ ಎನ್ನಲಾಗುತ್ತದೆ. ಆದರೆ ಆತ್ಮಸಾಧನೆಯ ಕಾರಣದಿಂದ ಉಪವಾಸವಾದರೆ, ಓಜಸ್ಸು ದೇಹದಲ್ಲಿ ವೃದ್ಧಿಸುವುದರಿಂದ ದೇಹಕ್ಕೆ ಹಾನಿಯಾಗುವುದಿಲ್ಲ. ಹಾಗಾಗಿ ಆತ್ಮಸಾಧನೆಯ ಜೊತೆಗೆ ಉಪವಾಸ ಮಾಡಿದಾಗ ಊಟವಿಲ್ಲದೆಯೂ ಜೀವಿಸಬಹುದು ಎಂದು ಹೇಳಿದರು.

ಹೃದಯ ಸ್ಥಾನದಲ್ಲಿರುವ ಓಜಸ್ಸೇ ಜೀವಿಯ ಅಳಿವು ಉಳಿವಿನ ಕಾರಣವಾಗಿದೆ. ಮದ್ಯಪಾನ, ಅಸಮರ್ಪಕ ಆಹಾರ, ಅತಿಯಾದ ವ್ಯಾಯಾಮ ಮುಂತಾದವುಗಳಿಂದ ಓಜಸ್ಸು ಕ್ಷೀಣಿಸುತ್ತದೆ. ಶುದ್ಧ ಗೋಘೃತ, ಗೋಕ್ಷೀರ, ಅರವತ್ತು ದಿನಗಳಲ್ಲಿ ಬೆಳೆಯುವ ಅಕ್ಕಿ, ಕುಲಾಂತರಿಯಲ್ಲದ ಗೋಧಿ, ಹೆಸರು ಕಾಳು ಮುಂತಾದವು ಓಜಸ್ಸಿನ ವೃದ್ಧಿಗೆ ಸಹಕಾರಿ ಎಂದು ತಿಳಿಸಿದರು.

ಜೀವನಕ್ಕೆ ಬೇಕಾದ ಎಲ್ಲವನ್ನೂ ಇಂದಿನ ವ್ಯವಸ್ಥೆ ಹುಡುಕಿ ಹುಡುಕಿ ನಾಶ ಮಾಡುವ ಕಾರ್ಯ ಮಾಡುತ್ತಿದ್ದು, ಒಂದೆಡೆ ಗೋಸಂತತಿ ಕ್ಷೀಣಿಸುತ್ತಿದ್ದರೆ, ತಳಿ ಅಭಿವೃದ್ಧಿಯ ಹೆಸರಿನಲ್ಲಿ ಪಾರಂಪರಿಕ ಭತ್ತ ಹಾಗೂ ಆಹಾರ ಬೆಳೆಗಳ ವಿನಾಶ ನಡೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕೇಂದ್ರ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಅವಿನಾಶ್ ಭಟ್, ಕೇಂದ್ರ ಸಾಂಬಾರು ಮಂಡಳಿಯ ಪ್ರಸನ್ನ ಕೆರೆಕೈ, ಧಾರವಾಡ ಜಿಲ್ಲಾ ರೋಟರಿ ಗವರ್ನರ್ ಗಣೇಶ್ ಭಟ್ ಉಪಸ್ಥಿತರಿದ್ದು, ಶ್ರೀಗಳ ಆಶೀರ್ವಾದ ಪಡೆದರು.

ಮಂಗಳೂರು ಹವ್ಯಕ ಮಂಡಲದ ಬಾಯಾರು, ಕೇಪು, ಕನ್ಯಾನ, ಮುಡಿಪು,ಕುಂದಾಪುರ, ಕೋಳ್ನೂರು ವಲಯಗಳ ಪರವಾಗಿ ಮೂಡಂಬಿಕಾನ ಸುಬ್ರಹ್ಮಣ್ಯ ಭಟ್ ಕುಟುಂಬದವರು ಗುರುಭಿಕ್ಷಾಸೇವೆ ಸಮರ್ಪಿಸಿದರು. ಶ್ರೀಮಠದ ಮಾಧ್ಯಮ ಶ್ರೀಸಂಯೋಜಕ ಸಂದೇಶ ತಲಕಾಲಕೊಪ್ಪ, ರಮೇಶ ಭಟ್ ಸರವು, ಉಮೇಶ ಭಟ್ ಕೊಣಮ್ಮೆ, ಮಲ್ಲಿಕಾ ಭಟ್, ಸುಮಾ ರಮೇಶ್, ಕೃಷ್ಣಪ್ರಮೋದ, ದಿನಪ್ರಧಾನರಾದ ಶ್ರೀಕಾಂತ ಕಾಳಮಂಜಿ ದಂಪತಿಗಳು ಉಪಸ್ಥಿತರಿದ್ದರು.

## ರಾಮಕೃಷ್ಣ ಹೆಗಡೆ ಜನ್ಮ ಶತಮಾನೋತ್ಸವ: ಮೌಲ್ಯಾಧಾರಿತ ರಾಜಕಾರಣೆಯ ಸ್ಮರಣೆ

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಆಡಳಿತ ವಿಕೇಂದ್ರೀಕರಣದ ಹರಿಕಾರ ಹಾಗೂ ಮೌಲ್ಯಾಧಾರಿತ ರಾಜಕಾರಣದ ಪ್ರತಿಪಾದಕ ರಾಮಕೃಷ್ಣ ಹೆಗಡೆ ಅವರ ಜನ್ಮ ಶತಮಾನೋತ್ಸವದ ಸಂದರ್ಭದಲ್ಲಿ ನಾಡಿನಾದ್ಯಂತ ಅವರ ರಾಜಕೀಯ ಜೀವನ, ಆಡಳಿತ ಸುಧಾರಣೆಗಳು ಹಾಗೂ ಸಾರ್ವಜನಿಕ ಸೇವೆಯನ್ನು ಸ್ಮರಿಸಲಾಗುತ್ತಿದೆ.



1926ರ ಆಗಸ್ಟ್ 29ರಂದು ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದ ದೊಡ್ಡಮನೆಯಲ್ಲಿ ಮಹಾಬಲೇಶ್ವರ ಹೆಗಡೆ ಮತ್ತು ಸರಸ್ವತಿ ದಂಪತಿಯ ಪುತ್ರರಾಗಿ ಜನಿಸಿದ ರಾಮಕೃಷ್ಣ ಹೆಗಡೆ, ವಿದ್ಯಾರ್ಥಿ ದೆಸೆಯಲ್ಲೇ ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವಹಿಸಿ ರಾಷ್ಟ್ರೀಯ ಹಿತಾಸಕ್ತಿಯನ್ನು ಮೈಗೂಡಿಸಿಕೊಂಡಿದ್ದರು. 1942ರ 'ಕ್ವಿಟ್ ಇಂಡಿಯಾ' ಚಳವಳಿಯಲ್ಲಿ ಪಾಲ್ಗೊಂಡು ಜೈಲು ವಾಸವನ್ನೂ ಅನುಭವಿಸಿದ್ದರು.

1957ರಲ್ಲಿ ಶಿರಸಿ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದ ಅವರು, ಎಸ್. ನಿಜಲಿಂಗಪ್ಪ ಅವರ ಸಂಪುಟದಲ್ಲಿ ಅತ್ಯಂತ ಕಿರಿಯ ಸಚಿವರಾಗಿ ಆಡಳಿತ ಪ್ರವೇಶಿಸಿದರು. ಬಳಿಕ ಹಣಕಾಸು ಮತ್ತು ಯೋಜನಾ ಖಾತೆಗಳನ್ನು ನಿರ್ವಹಿಸಿ, ಹಲವು ಮಹತ್ವದ ಬಜೆಟ್‌ಗಳನ್ನು ಮಂಡಿಸಿದ್ದರು.

1969ರಲ್ಲಿ ಕಾಂಗ್ರೆಸ್ ವಿಭಜನೆಯಾದಾಗ ಇಂದಿರಾ ಗಾಂಧಿ ವಿರುದ್ಧ ನಿಂತು ನಿಜಲಿಂಗಪ್ಪ ಅವರ ನೇತೃತ್ವದ ಕಾಂಗ್ರೆಸ್–ಒ ಬಣದೊಂದಿಗೆ ಗುರುತಿಸಿಕೊಂಡರು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲೂ ಸೆರೆವಾಸ ಅನುಭವಿಸಿದರು.

1983ರಲ್ಲಿ ಕರ್ನಾಟಕದ ಮೊದಲ ಕಾಂಗ್ರೆಸ್ಸೇತರ ಸರ್ಕಾರದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಹೆಗಡೆ, 1985ರಲ್ಲಿ ಮತ್ತೊಮ್ಮೆ ಮುಖ್ಯಮಂತ್ರಿಯಾಗಿ ರಾಜ್ಯದ ಆಡಳಿತಕ್ಕೆ ಹಲವು ಹೊಸ ಆಯಾಮಗಳನ್ನು ನೀಡಿದರು. ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಜಾರಿಗೆ ತಂದು ಜಿಲ್ಲಾ ಪರಿಷತ್, ತಾಲೂಕು ಪಂಚಾಯಿತಿ ಹಾಗೂ ಮಂಡಲ ಪಂಚಾಯಿತಿಗಳಿಗೆ ಅಧಿಕಾರ ನೀಡುವ ಮೂಲಕ ಆಡಳಿತವನ್ನು ಗ್ರಾಮೀಣ ಜನರ ಬಳಿಗೆ ಕೊಂಡೊಯ್ದದ್ದು ಅವರ ಪ್ರಮುಖ ಕೊಡುಗೆಗಳಲ್ಲಿ ಒಂದಾಗಿದೆ. ಮಹಿಳಾ ಮೀಸಲಾತಿ, ದಲಿತ ಹಾಗೂ ಹಿಂದುಳಿದ ವರ್ಗಗಳ ಪ್ರಾತಿನಿಧ್ಯ, ಲೋಕಾಯುಕ್ತ ಸಂಸ್ಥೆ ಬಲಪಡಿಸುವುದು, ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳು ಹಾಗೂ ಕನ್ನಡ ಕಾವಲು ಸಮಿತಿ ಸೇರಿದಂತೆ ಹಲವು ಆಡಳಿತಾತ್ಮಕ ಸುಧಾರಣೆಗಳಿಗೆ ಹೆಗಡೆ ಬುನಾದಿ ಹಾಕಿದ್ದರು. ಅಧಿಕಾರ ವಿಕೇಂದ್ರೀಕರಣದ ಮೂಲಕ ಸಾಮಾನ್ಯ ಜನರ ಪಾಲ್ಗೊಳ್ಳುವಿಕೆಗೆ ಹೆಚ್ಚಿನ ಅವಕಾಶ ಕಲ್ಪಿಸಿದ ಅವರ ಆಡಳಿತ ಮಾದರಿ ರಾಷ್ಟಮಟ್ಟದಲ್ಲೂ ಗಮನ ಸೆಳೆದಿತ್ತು.

1988ರ ಫೋನ್ ಕದ್ದಾಲಿಕೆ ವಿವಾದದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಅವರು, ಬಳಿಕ ಜನತಾದಳದ ನೇತೃತ್ವ ವಹಿಸಿದರು. ವಿ.ಪಿ. ಸಿಂಗ್ ಪ್ರಧಾನಿಯಾಗಿದ್ದ ಅವಧಿಯಲ್ಲಿ ಯೋಜನಾ ಆಯೋಗದ ಉಪಾಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು. 1998ರಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ ವಾಣಿಜ್ಯ ಸಚಿವರಾಗಿ ಕಾರ್ಯನಿರ್ವಹಿಸಿದರು.

ರಾಜಕೀಯದ ಜತೆಗೆ ಸಾಹಿತ್ಯ, ಕಲೆ ಮತ್ತು ಚಲನಚಿತ್ರ ಕ್ಷೇತ್ರದಲ್ಲೂ ಆಸಕ್ತಿ ಹೊಂದಿದ್ದ ಹೆಗಡೆ, ಪ್ರಜಾಶಕ್ತಿ ಹಾಗೂ ಮರಣ ಮೃದಂಗ ಚಿತ್ರಗಳಲ್ಲಿ ಅಭಿನಯಿಸಿದ್ದರು. ಸರಳತೆ, ರಾಜಕೀಯ ಶಿಷ್ಟಾಚಾರ, ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಬದ್ಧರಾಗಿದ್ದ ಅವರು, ಹಲವು ಯುವ ರಾಜಕಾರಣಿಗಳಿಗೆ ಮಾರ್ಗದರ್ಶಕರಾಗಿದ್ದರು. ಆಡಳಿತ ವಿಕೇಂದ್ರೀಕರಣದ ಹರಿಕಾರರಾಗಿ, ಮೌಲ್ಯಾಧಾರಿತ ರಾಜಕಾರಣದ ಪ್ರತೀಕವಾಗಿ ರಾಮಕೃಷ್ಣ ಹೆಗಡೆ ಅವರು ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಇಂದಿಗೂ ಅಚ್ಚಳಿಯದ ಹೆಜ್ಜೆ ಗುರುತು ಮೂಡಿಸಿದ್ದಾರೆ.

## ವಿಕೇಂದ್ರೀಕರಣದ ಮೂಲಕ ಪ್ರಜಾಪ್ರಭುತ್ವ ಬಲಪಡಿಸಿದ ಹೆಗಡೆ: ಉಪರಾಷ್ಟ್ರಪತಿ

● ವಿಕ್ರಮ ವಾಹಿನಿ | ಬೆಂಗಳೂರು

ಆಡಳಿತದ ವಿಕೇಂದ್ರೀಕರಣದ ಮೂಲಕ ರಾಜಕಾರಣದ ಜವಾಬ್ದಾರಿಯನ್ನು ಜನಸಾಮಾನ್ಯರಿಗೆ ತಲುಪಿಸಿ, ಹೊಣೆಗಾರಿಕೆ ಹಾಗೂ ನಾಗರಿಕರ ಸಹಭಾಗಿತ್ವಕ್ಕೆ ಉತ್ತೇಜನ ನೀಡಿದ ಶ್ರೇಷ್ಠ ಮುತ್ಸದ್ದಿ ರಾಮಕೃಷ್ಣ ಹೆಗಡೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಬಣ್ಣಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಜನ್ಮ ಶತಮಾನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮ ಸ್ವರಾಜ್ಯದ ಪರಿಕಲ್ಪನೆಯಡಿ ಪಂಚಾಯತ್‌ಗಳಿಗೆ ಅಧಿಕಾರ ನೀಡುವ ಮೂಲಕ ಹೆಗಡೆ ಅವರು ಕರ್ನಾಟಕವನ್ನು ರಾಷ್ಟ್ರಕ್ಕೆ ಮಾದರಿಯಾಗಿಸಿದ್ದರು ಎಂದರು.

1985ರ ಜಿಲ್ಲಾ ಪರಿಷತ್, ತಾಲ್ಲೂಕು ಪಂಚಾಯಿತಿ, ಮಂಡಲ ಪಂಚಾಯಿತಿ ಹಾಗೂ ನ್ಯಾಯ ಪಂಚಾಯಿತಿ ವ್ಯವಸ್ಥೆಯ ಮೂಲಕ ಆಡಳಿತವನ್ನು ಜನರ ಬಳಿಗೆ ಕೊಂಡೊಯ್ದ ಹೆಗಡೆಯವರ ದೂರದೃಷ್ಟಿ, ಬಳಿಕ 73ನೇ ಸಾಂವಿಧಾನಿಕ ತಿದ್ದುಪಡಿಯ ಮೂಲಕ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಾಂವಿಧಾನಿಕ ಸ್ಥಾನಮಾನ ದೊರೆಯಲು ಪ್ರೇರಣೆಯಾಯಿತು ಎಂದು ಹೇಳಿದರು. ಲೋಕಾಯುಕ್ತ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ಸಾರ್ವಜನಿಕ ಹುದ್ದೆ ನಂಬಿಕೆಯ ಹೊಣೆಗಾರಿಕೆ ಎಂಬ ಸಂದೇಶ ನೀಡಿದ್ದರು ಎಂದು ಸ್ಮರಿಸಿದರು.

ಹೆಗಡೆಯವರ ಪ್ರಾಮಾಣಿಕತೆ, ಧೈರ್ಯ, ರಾಷ್ಟ್ರಪ್ರೇಮ ಹಾಗೂ ಸಾರ್ವಜನಿಕ ಸೇವೆಯ ಬದ್ಧತೆಯನ್ನು ಯುವ ಪೀಳಿಗೆ ಅಳವಡಿಸಿಕೊಳ್ಳಬೇಕು. 'ರಾಷ್ಟ್ರ ಪ್ರಥಮ' ಎಂಬ ಅವರ ಮೌಲ್ಯಗಳನ್ನು ಮುಂದುವರಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

## ನಾಯಿಗೆ ಟೇಪ್: ಮನೆಗೆ ಕನ್ನ

● ವಿಕ್ರಮ ವಾಹಿನಿ | ಔರಂಗಾಬಾದ್

ಸಾಕುನಾಯಿ ಬೊಗಳಿ ಮನೆಯವರನ್ನು ಎಚ್ಚರಿಸದಂತೆ ಅದರ ಬಾಯಿಗೆ ಟೇಪ್ ಅಂಟಿಸಿ, ಮನೆಯೊಳಗೆ ನುಗ್ಗಿದ ಕಳ್ಳರು ಸುಮಾರು ರೂ 4 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ರೂ 40 ಸಾವಿರ ನಗದು ದೋಚಿರುವ ಘಟನೆ ಬಿಹಾರದ ಔರಂಗಾಬಾದ್ ಜಿಲ್ಲೆಯ ಭರ್ವಾರ್ ಗ್ರಾಮದಲ್ಲಿ ನಡೆದಿದೆ. ಶುಕ್ರವಾರ ರಾತ್ರಿ ಭಾರಿ ಮಳೆಯ ನಡುವೆಯೇ ಕಳ್ಳರು ಮನೆಗೆ ನುಗ್ಗಿದ್ದಾರೆ. ಹೊರಗೆ ಸುರಿಯುತ್ತಿದ್ದ ಮಳೆಯ ಶಬ್ದ ಹಾಗೂ ಮನೆಯೊಳಗೆ ಕೂಲರ್ ಕಾರ್ಯನಿರ್ವಹಿಸುತ್ತಿದ್ದುದನ್ನು ಬಳಸಿಕೊಂಡು ಕಳ್ಳರು ತಮ್ಮ ಕೃತ್ಯ ಎಸಗಿದ್ದಾರೆ ಎನ್ನಲಾಗಿದೆ. ಮೊದಲು ಅಂಗಳದಲ್ಲಿದ್ದ ಸಾಕುನಾಯಿಯನ್ನು ಹಿಡಿದು ಅದರ ಬಾಯಿಗೆ ಟೇಪ್ ಅಂಟಿಸಿದ ಬಳಿಕ ಮನೆಯ ಮೂರು ಕೋಣೆಗಳ ಬೀಗಗಳನ್ನು ಮುರಿದಿದ್ದಾರೆ.

ಮನೆಯ ಮಾಲೀಕ ಅಲೋಕ್ ಸಿಂಗ್ ಹಾಗೂ ಅವರ ಪತ್ನಿ ಮನೆಯಲ್ಲಿ ಮಲಗಿದ್ದರೂ, ಮಳೆ ಮತ್ತು ಕೂಲರ್‌ನ ಶಬ್ದದಿಂದ ಕಳ್ಳರು ನುಗ್ಗಿದ ಸಂಗತಿ ಅವರಿಗೆ ತಿಳಿಯಲಿಲ್ಲ. ಕಳ್ಳರು ಎರಡು ಕಪಾಟು ಹಾಗೂ ಎರಡು ಕಬ್ಬಿಣದ ಟ್ರಂಕ್‌ಗಳನ್ನು ಒಡೆದು, ಅದರಲ್ಲಿದ್ದ ಚಿನ್ನಾಭರಣ ಮತ್ತು ನಗದು ದೋಚಿ ಪರಾರಿಯಾಗಿದ್ದಾರೆ.

ಬೆಳಗ್ಗೆ ಎದ್ದಾಗ ಬೀಗಗಳು ಮುರಿದು, ವಸ್ತುಗಳು ಚೆಲ್ಲಾಪಿಲ್ಲಿಯಾಗಿರುವುದು ಕಂಡು ಕುಟುಂಬದವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಮುಫಾಸಿಲ್ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸಂತ್ರಸ್ತರ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 151,